ಕನ್ನಡ ದಿನಪತ್ರಿಕೆ
03 ಎಪ್ರಿಲ್ । ಬುಧವಾರ
03 APRIL 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 ಸಂಪುಟ – 5 ಸಂಚಿಕೆ – 39 ಪುಟ – 4 RNI . KARKAN/2020/79084 ADVRT EMAIL. BELAGAVIVARADIEDITOR@GMAIL.COM NEWSBELAGAVI@GMAIL.COM 9900332089 REG.NO G-2/PMG/KA/NK/BM/139/2024-26

ಎಂ ಸಿದ್ದರಾಮಯ್ಯರನ್ನು ಉಳಿಸಿಕೊಳ್ಳಲು ಚುನಾವಣಾ ಪ್ರಚಾರದಲ್ಲಿ ಭಾಗಿಯಾಗುತ್ತೇನೆ : ಮಾಜಿ ಸಚಿವ ಇಕ್ಬಾಲ್ ಅನ್ಸಾರಿ

ಕೊಪ್ಪಳ : ಜನಪ್ರಿಯ ಸಿಎಂ ಸಿದ್ದರಾಮಯ್ಯ ಉಳಿಸಿಕೊಳ್ಳಬೇಕಾಗಿದೆ ಹೀಗಾಗಿ ನಾನು ಚುನಾವಣಾ ಪ್ರಚಾರದಲ್ಲಿ ಭಾಗಿಯಾಗುತ್ತೇನೆ ಎಂದು ಮಾಜಿ ಸಚಿವ ಇಕ್ಬಾಲ್ ಅನ್ಸಾರಿ ಹೇಳಿದ್ದಾರೆ.

ಈ ಕುರಿತು ಆಡಿಯೋ ಸಂದೇಶ ರಿಲೀಸ್ ಮಾಡಿರುವ ಇಕ್ಬಾಲ್ ಅನ್ಸಾರಿ, ಪಕ್ಷದ ಪರ ಕೆಲಸ ಮಾಡಲು ಒಪ್ಪಿದ್ದೇನೆ.

ಸಿಎಂ ಸಿದ್ದರಾಮಯ್ಯ ಪ್ರಚಾರಕ್ಕೆ ಬರುವಂತೆ ಹೇಳಿದ್ದಾರೆ. ಸಿಎಂ ಸ್ಥಾನದಲ್ಲಿ ಮುಂದುವರೆಯಬೇಕಾದ್ರೆ ಚುನಾವಣಾ ಪ್ರಚಾರ ಭಾಗಿಯಾಗಬೇಕು ಎಂದು ಹೇಳಿದ್ದಾರೆ. ಹೀಗಾಗಿ ನಾನು ಚುನಾವಣಾ ಪ್ರಚಾರದಲ್ಲಿ ಭಾಗಿಯಾಗುತ್ತೇನೆ ಎಂದು ಹೇಳಿದ್ದಾರೆ.

ಜನಪ್ರಿಯ ಸಿಎಂ ಸಿದ್ದರಾಮಯ್ಯ ಉಳಿಸಿಕೊಳ್ಳಬೇಕಾಗಿದೆ. ಹೀಗಾಗಿ ಸಿದ್ದರಾಮಯ್ಯ ಆದೇಶ ಪಾಲನೆಗೆ ಮುಂದಾಗಿದ್ದೇನೆ. ಆಡಿಯೋ ಸಂದೇಶದಲ್ಲಿ ಹೇಳಿಕೆ ಬಿಡುಗಡೆ ಮಾಡಿದ್ದಾರೆ.

ಕಾಂಗ್ರೆಸ್ ಬಗ್ಗೆ ದಿನದಿಂದ ದಿನಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ: ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: ಬೆಳಗಾವಿ, ಚಿಕ್ಕೋಡಿ ಮತ್ತು ಕೆನರಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷದ ಕುರಿತು ದಿನದಿಂದ ದಿನಕ್ಕೆ ಉತ್ತಮ ವಾತಾವರಣ ನಿರ್ಮಾಣವಾಗುತ್ತಿದೆ. ಜನರಿಂದ ಒಳ್ಳೆಯ ಪ್ರತಿಕ್ರಿಯೆ ಬರುತ್ತಿದೆ. ಕಾಂಗ್ರೆಸ್ ಪಕ್ಷದ ಬಗ್ಗೆ ಜನರಿಗೆ ಸಂಪೂರ್ಣ ವಿಶ್ವಾಸ ಮೂಡಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಮಂಗಳವಾರ ಪತ್ರಕರ್ತರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಮೂರೂ ಕ್ಷೇತ್ರಗಳಲ್ಲಿ ಅತ್ಯಧಿಕ ಅಂತರದಿಂದ ಕಾಂಗ್ರೆಸ್ ಅಭ್ಯರ್ಥಿಗಳು ಗೆಲ್ಲಲಿದ್ದಾರೆ ಎಂದರು.

ಚುನಾವಣೆ ಕಣದಲ್ಲಿ ವಯಕ್ತಿಕ ಆರೋಪ, ಪ್ರತ್ಯಾರೋಪ ಹೆಚ್ಚುತ್ತಿದೆಯಲ್ಲ ಎನ್ನುವ ಪ್ರಶ್ನೆಗೆ, ನಾವು ವಯಕ್ತಿಕ ಆರೋಪಗಳನ್ನು ಮಾಡುತ್ತಿಲ್ಲ. ಬಿಜೆಪಿಯವರು ಸಾಮಾಜಿಕ ಜಾಲತಾಣಗಳಲ್ಲಿ ಹಾಕುತ್ತಿರುವುದನ್ನು ನಾನು ಹೇಳಿದ್ದೇನೆ. ಹೊರಗಿನವರು, ಒಳಗಿನವರು ಎಂದೆಲ್ಲ ಮಾತನಾಡುತ್ತಿರುವವರು ಬಿಜೆಪಿಯ ಸಾಮಾಜಿಕ ಜಾಲತಾಣದವರು. ಅವರು ಮಾತನಾಡಿದ್ದನ್ನು ನಾನು ಪುನರುಚ್ಚರಿಸಿದ್ದೇನೆ ಅಷ್ಟೆ ಎಂದರು.

ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರ ವಿಳಾಸವನ್ನು ಚುನಾವಣೆ ಫಲಿತಾಂಶದ ನಂತರ ಹುಡುಕಿಕೊಂಡು ಹೋಗುವಂತಹ ಪರಿಸ್ಥಿತಿ ಬರುತ್ತದೆ ಎನ್ನುವ ಬಾಲಚಂದ್ರ ಜಾರಕಿಹೊಳಿ ಹೇಳಿಕೆ ಕುರಿತು ಕೇಳಿದ ಪ್ರಶ್ನೆಗೆ, ಚುನಾವಣೆ ಫಲಿತಾಂಶದ ನಂತರ ಅಲ್ವಾ, ನಾನು ಕೂಡ ಚುನಾವಣೆ ಫಲಿತಾಂಶಕ್ಕಾಗಿ ಕಾಯುತ್ತಿದ್ದೇನೆ. ಈಗ ಇದಕ್ಕೆ ಪ್ರತಿಕ್ರಿಯಿಸುವುದಿಲ್ಲ ಎಂದರು.

ರಮೇಶ ಜಾರಕಿಹೊಳಿ ಕಾಂಗ್ರೆಸ್ ನಾಯಕರನ್ನು ಸೈಲೆಂಟ್ ಆಗಿ ಬಿಜೆಪಿಗೆ ಸೆಳೆಯುತ್ತಿದ್ದಾರಲ್ಲಾ ಎನ್ನುವ ಪ್ರಶ್ನೆಗೆ ಉತ್ತರಿಸಿ, ನನಗೇನೂ ಹಾಗೆ ಅನಿಸುವುದಿಲ್ಲ, ಅವರ ತಂತ್ರವನ್ನು ಅವರು ಮಾಡುತ್ತಾರೆ. ನಮ್ಮ ತಂತ್ರವನ್ನು ನಾವು ಮಾಡುತ್ತೇವೆ. ಅಂತಿಮವಾಗಿ ಮತದಾರರು ಯಾರಿಗೆ ಆಶೀರ್ವಾದ ಮಾಡುತ್ತಾರೋ ಅವರು ಗೆಲ್ಲುತ್ತಾರೆ ಎಂದರು.

ಪತ್ರಕರ್ತರ ಪ್ರಶ್ನೆಗೆ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಉತ್ತರಿಸಿ, ಬೆಳಗಾವಿ ಜಿಲ್ಲೆಯ ಜನರು ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಕೈ ಹಿಡಿದಿರುವುದನ್ನು ರಾಜ್ಯದ ಜನರು ನೋಡಿದ್ದಾರೆ.

ಆಗ ಯಾರ್ಯಾರು ನಮ್ಮ ವಿರುದ್ಧ ಕೆಲಸ ಮಾಡಿದ್ದರು, ಯಾರ್ಯಾರು ಗುಪ್ತ ಸಭೆ ಮಾಡಿದ್ದಾರೆ.

ಯಾರ್ಯಾರು ದೊಡ್ಡ ದೊಡ್ಡ ಸಭೆಗಳನ್ನು ಮಾಡಿದ್ದಾರೆ ಎನ್ನುವುದನ್ನು ಎಲ್ಲರೂ ನೋಡಿದ್ದಾರೆ.

ಆಗ ಜನರು ಏನು ಉತ್ತರ ಕೊಟ್ಟಿದ್ದಾರೆ ಎನ್ನುವುದನ್ನೂ ಜನರು ನೋಡಿದ್ದಾರೆ. ಈಗಲೂ ಜನರು ಅದೇ ರೀತಿ, ಅದಕ್ಕಿಂತ ದೊಡ್ಡ ಉತ್ತರವನ್ನು ಕೊಡುತ್ತಾರೆ ಎಂದರು.

ಸಿದ್ದರಾಮಯ್ಯ ಪ್ರಚಾರಕ್ಕೆ ಬರುತ್ತಾರಾ ಎನ್ನುವ ಪ್ರಶ್ನೆಗೆ, ಮೊದಲ ಹಂತದ ಚುನಾವಣೆ ಮುಗಿದ ನಂತರ ಸಿದ್ದರಾಮಯ್ಯ 2 ಬಾರಿ ಪ್ರಚಾರಕ್ಕೆ ಬರುತ್ತಾರೆ. ಬೆಳಗಾವಿ, ಚಿಕ್ಕೋಡಿ ಮತ್ತು ಕಿತ್ತೂರಿನಲ್ಲಿ ಪ್ರಚಾರ ಮಾಡುತ್ತಾರೆ ಎಂದು ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

ಮಹಾರಾಷ್ಟ್ರದ ಯಾವ ನಾಯಕರು ಬರುತ್ತಾರೆ ಎನ್ನುವ ಪ್ರಶ್ನೆಗೆ, ಸ್ಟಾರ್ ಪ್ರಚಾರಕರ ಪಟ್ಟಿಯನ್ನು ನಮ್ಮ ಪಕ್ಷದ ಹೈಕಮಾಂಡ್ ನವರು ಮಾಡಿದ್ದಾರೆ. ಅವರವರ ಜನಪ್ರಿಯತೆಯನ್ನು ಆಧರಿಸಿ ಸ್ಟಾರ್ ಪ್ರಚಾರಕರನ್ನು ಆಯಾ ಕ್ಷೇತ್ರಗಳಿಗೆ ಕಳಿಸುತ್ತಾರೆ ಎಂದರು.

ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್, ಮಲ್ಲೇಶ ಚೌಗಲೆ ಮೊದಲಾದವರು ಈ ಸಂದರ್ಭದಲ್ಲಿ ಇದ್ದರು.

ನನಗೆ ವಯಸ್ಸಾಗುತ್ತಿದೆ, ತವರು ಕ್ಷೇತ್ರದಲ್ಲಿಯೇ ರಾಜಕೀಯ ನಿವೃತ್ತಿ ಘೋಷಿಸಿದ ಸಿಎಂ ಸಿದ್ದರಾಮಯ್ಯ

ಮೈಸೂರು: ಲೋಕಸಭಾ ಚುನಾವಣೆಯ ಪ್ರಚಾರದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಮೈಸೂರಿನಲ್ಲಿ ಚುನಾವಣಾ ರಾಜಕೀಯ ನಿವೃತ್ತಿ ಕುರಿತು ತವರು ಕ್ಷೇತ್ರದಲ್ಲಿಯೇ ಘೋಷಣೆ ಮಾಡಿದ್ದಾರೆ. ಸಿದ್ದರಾಮಯ್ಯ ಅವರ ನಿರ್ಧಾರ ಅವರ ಅಭಿಮಾನಿಗಳಲ್ಲಿ ಆಘಾತ ನೀಡಿದೆ.

ಜಿಲ್ಲೆಯಲ್ಲಿ ಸುದ್ದಿಗಾರರ ಜೊತೆಗೆ ಮಾತನಾಡಿರುವ ಅವರು, ನನಗೆ ವಯಸ್ಸಾಗುತ್ತಿದೆ. ಮುಂದಿನ ನಾಲ್ಕು ವರ್ಷದ ಬಳಿಕ ವಿಧಾನಸಭಾ ಚುನಾವಣೆ ಎದುರಾಗುತ್ತದೆ. ನಾನು ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ. ಚುನಾವಣಾ ರಾಜ–ಕೀಯದಿಂದ ಹಿಂದೆ ಸರಿಯಲಿದ್ದೇನೆ ಎಂದು ಅವರು ತಿಳಿಸಿದರು. ಜೊತೆಗೆ ಈ ನಿರ್ಧಾರಕ್ಕೆ ಕಾರಣಗಳೇನು ಎಂಬುದನ್ನು ಸ್ವತಃ ಸಿದ್ದರಾಮಯ್ಯ ಅವರೇ ವಿವರಿಸಿದ್ದಾರೆ.

ಅವರವರ ದೇಹಸ್ಥಿತಿ, ಆರೋಗ್ಯದ ಬಗ್ಗೆ ಅವರಿಗೇ ಗೊತ್ತಿರುತ್ತದೆ. ನನಗೆ ಮೊದಲಿನಂತೆ ಉತ್ಸಾಹ ಭರಿತವಾಗಿ ಕೆಲಸ ಮಾಡಲು ಆಗುತ್ತಿಲ್ಲ.

ನನಗೆ ಯಾವ ಆತಂಕ ಇಲ್ಲ. ಆತಂಕ ಇದ್ದರೆ ಮಾತ್ರ ಟೆನ್ಷನ್ ಇರುತ್ತದೆ. ನನಗೆ ಆ ರೀತಿ ಏನು ಇಲ್ಲ. ಹೀಗಾಗಿ ನಾನು ಚುನಾವಣಾ ರಾಜಕಾರಣದಿಂದ ಹಿಂದೆ ಸರಿಯುವ ನಿರ್ಧಾರ ಮಾಡಿದ್ದೇನೆ ಎಂದು ಅವರು ಸ್ಪಷ್ಟಪಡಿಸಿದರು.

ಜೆಡಿಎಸ್ ರಾಜ್ಯದಲ್ಲಿ ಮುಂದೆ ಇರೋದೇ ಇಲ್ಲ: ಡಿ.ಕೆಶಿ ಸ್ಫೋಟಕ ಹೇಳಿಕೆ

ಬೆಂಗಳೂರು: ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ, ಜೆಡಿಎಸ್ ನಾಯಕರು ಮೈತ್ರಿ ಮಾಡಿಕೊಂಡು ಕಾಂಗ್ರೆಸ್ ಪಕ್ಷದ ವಿರುದ್ಧ ಮುಗಿಬಿದ್ದಿದ್ದಾರೆ. ರಾಜ್ಯದ 28 ಲೋಕಸಭಾ ಕ್ಷೇತ್ರವನ್ನು ಗೆಲ್ಲಲು ರಣ–ತಂತ್ರ ಹೆಣೆಯುತ್ತಿದ್ದಾರೆ. ಬಿಜೆಪಿ, ಜೆಡಿಎಸ್ ರಣತಂತ್ರಕ್ಕೆ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ ಶಿವಕುಮಾರ್ ಟಕ್ಕರ್ ಕೊಟ್ಟಿದ್ದು ತಿರುಗೇಟು ಕೊಟ್ಟಿದ್ದಾರೆ.

ಡಿಸಿಎಂ ಡಿ.ಕೆ ಶಿವಕುಮಾರ್ ಅವರು ಬಿಜೆಪಿ ಜೊತೆ ದೋಸ್ತಿ ಮಾಡಿಕೊಂಡಿರುವ ಜೆಡಿಎಸ್ ಪಕ್ಷದಲ್ಲಿ ರಾಜ್ಯದಲ್ಲಿ ಮುಂದೆ ಇರೋದೇ ಇಲ್ಲ ಎಂದು ಭವಿಷ್ಯ ನುಡಿದಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ಜಾತಿ ಬಗ್ಗೆ ಮಾತನಾಡುತ್ತಿದ್ದಾರೆ ಅಂತ ಗೊತ್ತಾಗಿದೆ. ಹಾಗಾದರೆ ಕುಮಾರಸ್ವಾಮಿಯನ್ನ ಇಳಿಸುವಾಗ ಎಲ್ಲಿ ಹೋಗಿತ್ತು ಜಾತಿ ಎಂದು ಡಿಕೆಶಿ ಪ್ರಶ್ನಿಸಿದ್ದಾರೆ.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅತಿ ಹೆಚ್ಚು ಒಕ್ಕಲಿಗ ನಾಯಕರಿಗೆ ಟಿಕೆಟ್ ಕೊಟ್ಟಿದೆ. ದಳದವರು ಕೇವಲ ಕುಟುಂಬದವ–ರಿಗೆ ಟಿಕೆಟ್ ಕೊಟ್ಟಿದ್ದಾರೆ. ಬಹಳಷ್ಟು ನಾಯಕರು ಜೆಡಿಎಸ್‌ನಿಂದ ಬರ್ತಾ ಇದ್ದಾರೆ. ಯಾರು ಸರ್ಕಾರ ಕಿತ್ತು ಹಾಕಿದ್ರೋ ಅವರ ಜೊತೆಗೆ ನೆಂಟಸ್ಥಿಕೆ ಮಾಡಿಕೊಂಡಿದ್ದಾರೆ. ಎಂತಹ ನೀಚ ರಾಜಕೀಯ ನಡೆಯುತ್ತಿದೆ ಅಂತ ಜೆಡಿ–ಎಸ್ ಕಾರ್ಯಕರ್ತರು ಬೇಸರಗೊಂಡಿದ್ದಾರೆ. ಹೀಗಾಗಿ ಮುಂದೆ ರಾಜ್ಯದಲ್ಲಿ ಜೆಡಿಎಸ್ ಇರುವುದಿಲ್ಲ ಎಂದು ಡಿ.ಕೆ ಶಿವಕುಮಾರ್ ಕಿಡಿಕಾರಿದ್ದಾರೆ.

ಕೇಂದ್ರ ಸಚಿವ ಜೋಶಿ ವಿರುದ್ಧ ದಿಂಗಾಲೇಶ್ವರ ಶ್ರೀ ಸ್ಪರ್ಧೆ ಬಹುತೇಕ ಫಿಕ್ಸ್

ಧಾರವಾಡ: ನಾನು ಯಾವುದೇ ಆಮಿಷಕ್ಕೆ ಒಳಗಾಗುವುದಿಲ್ಲ, ಯಾವ ಕಾರಣಕ್ಕೂ ನಾನು ಹೋರಾಟದಿಂದ ಹಿಂದೆ ಸರಿಯಲ್ಲ. ಚುನಾವಣೆಗೆ ನಾನೇ ಸ್ಪರ್ಧೆ ಮಾಡುವಂತೆ ಭಕ್ತರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಶೀಘ್ರವೇ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಅಂತಿಮ ನಿರ್ಧಾರವನ್ನು ಪ್ರಕಟಿಸುತ್ತೇನೆ ಎಂದು ಶಿರಹಟ್ಟಿಯ ಫಕೀರೇಶ್ವರ ಮಠದ ದಿಂಗಾಲೇಶ್ವರ ಸ್ವಾಮೀಜಿ ಹೇಳಿದ್ದಾರೆ. ಈ ಮೂಲಕ ಪಕ್ಷೇತರ ಅಭ್ಯರ್ಥಿಯಾಗಿ ಧಾರವಾಡದಲ್ಲಿ ಸ್ಪರ್ಧಿಸುವುದು ಬಹುತೇಕ ಖಚಿತ ಎಂದು ಪರೋಕ್ಷವಾಗಿ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಭಕ್ತರ ಸಭೆ ಬಳಿಕ ಮಾತನಾಡಿದ ಅವರು, ಚುನಾವಣೆಗೆ ನಾನೇ ಸ್ಪರ್ಧೆ ಮಾಡುವಂತೆ ಭಕ್ತರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಪಕ್ಷೇತರ ಅಭ್ಯರ್ಥಿ ಆಗಬೇಕೆಂದು ಭಕ್ತರು ಹೇಳಿದ್ದಾರೆ. ಉತ್ತರ ಭಾರತದ ರೀತಿಯಲ್ಲಿ ದಕ್ಷಿಣ ಭಾರತದಲ್ಲಿ ಸ್ವಾಮೀಜಿಗಳು ರಾಜಕಾರಣಕ್ಕೆ ಬರಬೇಕೆಂದು ಭಕ್ತರು ಸಲಹೆ ನೀಡಿದ್ದಾರೆ. ಧಾರವಾಡ ಲೋಕಸಭಾ ಕ್ಷೇತ್ರಕ್ಕೆ ನೀವೇ ಬರಬೇಕೆಂದು ಭಕ್ತರು ಒಕ್ಕೊರಲಿನ ಅಭಿಪ್ರಾಯ ಹೇಳಿದ್ದಾರೆ ಎಂದು ಹೇಳಿದರು.

ನಮ್ಮ ಹಿರಿಯ ಗುರುಗಳು ಮತ್ತು ಮಠದ ಭಕ್ತರ ಅಭಿಪ್ರಾಯ ಕೇಳಬೇಕಿದೆ. ಅತಿ ಶೀಘ್ರದಲ್ಲಿ ಬೆಂಗಳೂರಲ್ಲಿ ಸುದ್ದಿಗೋಷ್ಠಿ ನಡೆಸಿ ಅಂತಿಮ ನಿರ್ಧಾರವನ್ನ ಪ್ರಕಟಿಸುತ್ತೇನೆ. ನಾನು ಯಾವುದೇ ಆಮಿಷಕ್ಕೆ ಯಾವುದೇ ಆಮಿಷಕ್ಕೆ ಒಳಗಾಗುವುದಿಲ್ಲ, ಯಾವ ಕಾರಣಕ್ಕೂ ನಾನು ಹೋರಾಟದಿಂದ ಹಿಂದೆ ಸರಿಯಲ್ಲ ಎಂದು ದಿಂಗಾಲೇಶ್ವರ ಸ್ವಾಮೀಜಿ ಸ್ಪಷ್ಟಪಡಿಸಿದರು.

ಇನ್ನು, ಧಾರವಾಡ ಲೋಕಸಭಾ ಕ್ಷೇತ್ರದಿಂದ ಚುನಾವಣೆಗೆ ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧಿಸಬೇಕು ಎಂದು ಭಕ್ತರು ನಿರ್ಣಯ ಕೈಗೊಂಡಿದ್ದು, ಧಾರವಾಡದಲ್ಲಿ ಭಕ್ತರ ಸಭೆ ಕರೆದು ಸ್ಪರ್ಧೆ ಬಗ್ಗೆ ಚರ್ಚೆ ನಡೆಸಿ ಈ ತೀರ್ಮಾನ ಹೇಳಲಾಗಿದೆ. ಧಾರವಾಡ ಲೋಕಸಭೆ ಚುನಾವಣೆ ಹಿತರಕ್ಷಣಾ ಸಮಿತಿ ರಚನೆ ಮಾಡಲು ಈ ಸಭೆಯಲ್ಲಿ ತೀರ್ಮಾನಿಸಲಾಯಿತು.

ಪ್ರಹ್ಲಾದ್ ಜೋಶಿಗೆ ಸಂಕಷ್ಟ: ದಿಂಗಾಲೇಶ್ವರ ಸ್ವಾಮೀಜಿ ಹಾಲಿ ಸಂಸದ ಪ್ರಹ್ಲಾದ್ ಜೋಶಿ ವಿರುದ್ಧ ಸಾಲು ಸಾಲು ಆರೋಪ ಮಾಡಿದ್ದಾರೆ. ಇದ–ರಿಂದ ಐದನೇ ಬಾರಿ ಆಯ್ಕೆ ಬಯಸಿ ಕಣಕ್ಕಿಳಿದಿದ್ದ ಪ್ರಹ್ಲಾದ್ ಜೋಶಿಗೆ ಸವಾಲು ಎದುರಾಗಿದೆ. ಈಗಾಗಲೇ ಕ್ಷೇತ್ರದಲ್ಲಿ ಬ್ರಾಹ್ಮಣ ಗಿಖ ಲಿಂಗಾಯತ ವೇದಿಕೆ ಸೃಷ್ಟಿಯಾಗುತ್ತಿದ್ದು, ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧಿಸಿದರೆ ಲಿಂಗಾಯತ ಮತಗಳು ವಿಭಜನೆಯಾಗುವುದು ಖಂಡಿತ. ಈ ಹಿನ್ನೆಲೆ ಬಿಜೆಪಿ ನಾಯಕರು ದಿಂಗಾಲೇಶ್ವರ ಸ್ವಾಮೀಜಿ ಮನವೊಲಿಸುವ ಕಾರ್ಯವನ್ನು ಮಾಡುತ್ತಿದ್ದಾರೆ.

ಚುನಾವಣೆ ಕಣಕ್ಕೆ ದೇಗುಲಹಳ್ಳಿ ವೀರೇಶ್ವರ ಸ್ವಾಮೀಜಿ

ಚನ್ನಮ್ಮನ ಕಿತ್ತೂರು (ಬೆಳಗಾವಿ ಜಿಲ್ಲೆ): ತಾಲ್ಲೂಕಿನ ದೇಗುಲಹಳ್ಳಿ ಹಾಗೂ ಅಂಬಡಗಟ್ಟಿ ಗುರು ಮಡಿವಾಳೇಶ್ವರ ಮಠಗಳಿಗೆ ಪೀಠಾಧ್ಯಕ್ಷರಾಗಿರುವ ವೀರೇಶ್ವರ ಸ್ವಾಮೀಜಿ ಅವರು ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಲು ನಿರ್ಧರಿಸಿದ್ದಾರೆ.

ಅಂಬಡಗಟ್ಟಿ ಶ್ರೀಮಠದಲ್ಲಿ ಸೋಮವಾರ ಮಾತನಾಡಿದ ಅವರು, 'ಭಕ್ತರ ನಿರ್ಣಯ ಮತ್ತು ವೈಯಕ್ತಿಕ ಆಸಕ್ತಿಯಿಂದಾಗಿ ಈ ಬಾರಿಯ ಲೋಕಸಭೆ ಚುನಾವಣೆಗೆ ಸ್ಪರ್ಧಿಸುತ್ತಿದ್ದೇನೆ.

ಯಾವುದೇ ಪಕ್ಷ ಅಥವಾ ವ್ಯಕ್ತಿಯ ವಿರುದ್ಧ ಮುನಿಸಿನಿಂದಾಗಿ ಸ್ಪರ್ಧಿಸುತ್ತಿಲ್ಲ. ಭಕ್ತ ಬಳಗ ಸ್ಪರ್ಧಿಸುವಂತೆ ಒತ್ತಾಯ ಮಾಡುತ್ತಿದೆ. ಅವರೊಂದಿಗೆ ಚರ್ಚಿಸಿ ಈ ನಿರ್ಣಯಕ್ಕೆ ಬಂದಿರುವೆ' ಎಂದು ತಿಳಿಸಿದರು.

'ಧಾರ್ಮಿಕ ಮತ್ತು ರಾಜಕೀಯ ಕ್ಷೇತ್ರಗಳ ಉದ್ದೇಶ ಸಮಾಜಸೇವೆ, ಸಮಾಜ ಸುಧಾರಣೆ ಆಗಿದೆ. ಬೆಳಗಾವಿ ಕ್ಷೇತ್ರದಲ್ಲಿ ಬರುವ ಎಂಟು ವಿಧಾನಸಭೆ ಕ್ಷೇತ್ರಗಳಲ್ಲಿ ನಮ್ಮದೇ ಆದ ಭಕ್ತ ಬಳಗವನ್ನು ಹೊಂದಿದ್ದೇವೆ. ಅವರೆಲ್ಲ ನನ್ನ ಪರವಾಗಿ ಚುನಾವಣೆಯಲ್ಲಿ ದುಡಿಯಲಿದ್ದಾರೆ' ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಲೋಕಸಭಾ ಚುನಾವಣೆ: ಆಯೋಗದಿಂದ ರಾಜ್ಯಗಳಿಗೆ ವಿಶೇಷ ವೀಕ್ಷಕರ ನೇಮಕ

ನವದೆಹಲಿ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಹಲವು ರಾಜ್ಯಗಳಲ್ಲಿ ಆಡಳಿತಾತ್ಮಕ, ಭದ್ರತೆ ಮತ್ತು ವೆಚ್ಚದ ಮೇಲ್ವಿಚಾರಣೆ ಉದ್ದೇಶಗಳಿಗಾಗಿ ವಿಶೇಷ ವೀಕ್ಷಕರನ್ನು ಚುನಾವಣಾ ಆಯೋಗ ಮಂಗಳವಾರ ನೇಮಿಸಿದೆ.

ಹಣ, ತೋಳ್ಬಲ, ಸುಳ್ಳು ಮಾಹಿತಿ ವಿರುದ್ಧವಾಗಿ ಚುನಾವಣಾ ಪ್ರಕ್ರಿಯೆಯನ್ನು ಕಟ್ಟುನಿಟ್ಟಾದ ಜಾಗರೂಕತೆಯಿಂದ ಮೇಲ್ವಿಚಾರಣೆ ಮಾಡುವ ಕಾರ್ಯಕ್ಕಾಗಿ ಮಾಜಿ ನಾಗರಿಕ ಸೇವಾ ಅಧಿಕಾರಿಗಳನ್ನು ವಿಶೇಷ ವೀಕ್ಷಕರನ್ನಾಗಿ ನೇಮಿಸಲಾಗಿದೆ ಎಂದು ಚುನಾವಣಾ ಸಮಿತಿ ಹೇಳಿದೆ.

ಏಳು ಕೋಟಿಗೂ ಹೆಚ್ಚು ಜನಸಂಖ್ಯೆ ಇರುವ ಪಶ್ಚಿಮ ಬಂಗಾಳ, ಉತ್ತರ ಪ್ರದೇಶ, ಮಹಾರಾಷ್ಟ್ರ, ಬಿಹಾರ ಮತ್ತು ಲೋಕಸಭೆ ಜೊತೆಗೆ ವಿಧಾನಸಭಾ ಚುನಾವಣೆ ನಡೆಯಲಿರುವ ಒಡಿಶಾ ಮತ್ತು ಆಂಧ್ರ ಪ್ರದೇಶದಲ್ಲಿ ವಿಶೇಷ ವೀಕ್ಷಕರನ್ನು (ಜನರಲ್ ಮತ್ತು ಪೊಲೀಸ್) ನಿಯೋಜಿಸಲಾಗಿದೆ.

ಆಂಧ್ರಪ್ರದೇಶ, ಕರ್ನಾಟಕ, ತಮಿಳುನಾಡು, ಉತ್ತರ ಪ್ರದೇಶ ಮತ್ತು ಒಡಿಶಾದಲ್ಲೂ ವಿಶೇಷ ವೆಚ್ಚ ವೀಕ್ಷಕರನ್ನು ನಿಯೋಜಿಸಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

ಲೋಕಸಭಾ ಚುನಾವಣೆ: ಚೆಕ್ ಪೋಸ್ಟ್‌ಗಳಲ್ಲಿ ತಪಾಸಣೆ ತೀವ್ರಗೊಳಿಸಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ

ಬೆಳಗಾವಿ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಸ್ಥಾಪಿಸಲಾಗಿರುವ ಚೆಕ್ ಪೋಸ್ಟ್ ಗಳಲ್ಲಿ ತಪಾಸಣೆ ತೀವ್ರಗೊಳಿಸಬೇಕು. ಅಕ್ರಮವಾಗಿ ಹಣ, ಮದ್ಯ ಅಥವಾ ಇತರೆ ವಸ್ತುಗಳ ಸಾಗಾಣಿಕೆ ಕಂಡುಬಂದಲ್ಲಿ ಕೂಡಲೇ ವಶಪಡಿಸಿಕೊಂಡ

ಏ.5 ರಂದು ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ ಜಯಂತಿ ಕಾರ್ಯಕ್ರಮ

ಧಾರವಾಡ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಏಪ್ರಿಲ್ 5, 2024 ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಹಸಿರು ಕ್ರಾಂತಿಯ ಹರಿಕಾರ, ಭಾರತದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ ಜಯಂತಿಯನ್ನು ಆಚರಿಸಲಾಗುತ್ತದೆ.

ಬೆಳಿಗ್ಗೆ 9.45 ಗಂಟೆಗೆ ನಗರದ ಆಲೂರು ವೆಂಕಟರಾವ್ ವೃತ್ತದಲ್ಲಿರುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ ರವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುತ್ತದೆ. ಮತ್ತು ಏ.5 ರಂದು ಬೆಳಿಗ್ಗೆ 10 ಗಂಟೆಗೆ ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಡಾ. ಬಾಬು ಜಗಜೀವನ ರಾಂ ಅವರ ಜಯಂತಿ ಕಾರ್ಯಕ್ರಮವನ್ನು ಆಚರಿಸಬೇಕು. ಹಾಗೂ ನಂತರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿನ ಜಿಲ್ಲಾಮಟ್ಟದ ಜಯಂತಿ ಕಾರ್ಯಕ್ರಮಕ್ಕೆ ಆಗಮಿಸಬೇಕು.

ಈ ಕುರಿತು ಎಲ್ಲ ಇಲಾಖೆಗಳಿಗೆ ಮಾಹಿತಿ ಕಳಿಸಲಾಗಿದ್ದು, ಎಲ್ಲ ಅಧಿಕಾರಿಗಳು ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್‌ಎಸ್‌ಎಲ್ಸಿ ಪರೀಕ್ಷೆ ಗಣಿತ ಪರೀಕ್ಷೆಗೆ 28,256 ವಿದ್ಯಾರ್ಥಿಗಳು ಹಾಜರು: 350 ಗೈರು

ಧಾರವಾಡ: ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ಉತ್ತಮ ರೀತಿಯಲ್ಲಿ ನಡೆದಿದ್ದು, ಇಂದಿನ ಗಣಿತ ವಿಷಯದ ಪರೀಕ್ಷೆಗೆ ಜಿಲ್ಲೆಯ ಪರೀಕ್ಷಾ ಕೇಂದ್ರಗಳಿಗೆ 28,256 ವಿದ್ಯಾರ್ಥಿಗಳು ಹಾಜರಾಗಿದ್ದರು. ಮತ್ತು ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ 350 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್.ಕೆಳದಿಮಠ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲೆಯ 7 ತಾಲೂಕುಗಳ 101 ಪರೀಕ್ಷಾ ಕೇಂದ್ರಗಳಲ್ಲಿ ನಿಯಮಾನುಸಾರ ಪರೀಕ್ಷೆ ನಡೆದಿವೆ. ಜಾಗೃತ ದಳದ ಅಧಿಕಾರಿಗಳು ನಕಲು ತಡೆಯಲು ಉತ್ತಮ ತಪಾಸಣೆ ಕೈಗೊಂಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಅಪರೂಪದ ಘಟನೆ: ಒಂದನೇ ಮಗು ಹುಟ್ಟಿದ 22 ದಿನದ ನಂತರ 2ನೇ ಮಗುವಿಗೆ ಜನ್ಮ ನೀಡಿದ ತಾಯಿ

ಓರ್ವ ತಾಯಿಯು ಅತ್ಯಂತ ಅಪರೂಪದ ಅವಳಿಗಳಿಗೆ ಜನ್ಮ ನೀಡಿರುವ ಬಗ್ಗೆ ವರದಿಯಾಗಿದೆ.

ಬೇರೆ ಬೇರೆ ಆಸ್ಪತ್ರೆಗಳಲ್ಲಿ ಮೊದಲ ಮಗು ಜನಿಸಿದ 22 ದಿನಗಳ ನಂತರ ಮತ್ತೊಂದು ಮಗು ಜನಿಸಿದ ಅಪರೂಪದ ಘಟನೆ ಇಂಗ್ಲೆಂಡ್‌ನಲ್ಲಿ ಜರುಗಿದ್ದು, ದುರದೃಷ್ಟವಶಾತ್ ಒಂದು ಮಗು ಮಾತ್ರ ಬದುಕುಳಿದಿದ್ದು, ಮತ್ತೊಂದು ಮಗು ಉಸಿರು ಚಲ್ಲಿದೆ.

ಕೇಲೀ ಡಾಯ್ಲ್ ಎಂಬ ಮಹಿಳೆ ಸಂಪೂರ್ಣವಾಗಿ ಆರೋಗ್ಯಕರ ಅವಳಿಗಳೊಂದಿಗೆ ಗರ್ಭಿಣಿಯಾಗಿದ್ದಳು. ಮೊದಲ ಮಗು ಅರ್ಲೋ ಸ್ವಾಭಾವಿಕವಾಗಿ ಜನಿಸಿತ್ತಾದರೂ 1.1 ಪೌಂಡ್ ತೂಕವಿರುವ ಈ ಮಗು ಹೊಕ್ಕುಳಬಳ್ಳಿಯಲ್ಲಿ ರಕ್ತ ಹೆಪ್ಪುಗಟ್ಟಿ ಕಾರಣ ಸಾವನ್ನಪ್ಪಿತು.

22 ವರ್ಷ ವಯಸ್ಸಿನ ತಾಯಿಯನ್ನು ವಿಶ್ರಾಂತಿಗಾಗಿ ಮನೆಗೆ ಕಳುಹಿಸಲಾಯಿತು. 22 ದಿನಗಳ ನಂತರ ಆಸ್ಪ್ರೋ ಸಿಸೇರಿಯನ್ ಮೂಲಕ ಜನಿಸಿದರು ಮತ್ತು ಎಲ್ಲಾ ನಿರೀಕ್ಷೆಗಳಿಗೆ ವಿರುದ್ಧವಾಗಿ ಅದ್ಭುತವಾಗಿ ಬದುಕುಳಿದರು.

ಬರ ಪರಿಹಾರ, ಸಾಲ ಮನ್ನಾಗೆ ಆಗ್ರಹ: ಬೆಳಗಾವಿ ಜಿಲ್ಲಾಧಿಕಾರಿ ಕಚೇರಿಗೆ ರೈತರ ಮುತ್ತಿಗೆ

ಬೆಳಗಾವಿ: ಲೋಕಸಭೆ ಚುನಾವಣೆ ಕಾವು ರಂಗೇರುತ್ತಿದೆ. ರಾಜಕೀಯ ನಾಯಕರು ಚುನಾವಣಾ ಪ್ರಚಾರ, ರಾಜಕೀಯ ತಂತ್ರಗಾರಿಕೆಯಲ್ಲಿ ಬ್ಯುಸಿಯಾಗಿದ್ದಾರೆ. ಈ ಬಿರುಬಿಸಿಲಿನಲ್ಲಿ ರೈತರ ಆಕ್ರೋಶ ಜೋರಾಗಿದೆ.

ಸರ್ಕಾರ ಸೇರಿದಂತೆ ಅಧಿಕಾರಿಗಳು, ಜನಪ್ರತಿನಿಧಿಗಳು ಚುನಾವಣೆಯಲ್ಲಿ ತೊಡಗಿದ್ದು, ಇತ್ತ ರೈತರು ಪ್ರತಿಭಟನೆಗಿಳಿದಿದ್ದಾರೆ. ತಮ್ಮ ಜಾನುವಾರುಗಳಿಗೆ ಮೇವಿಲ್ಲ ನೀರಿಲ್ಲದೇ ಪರಿತಪ್ಪಿಸುತ್ತಿವೆ. ಬರ ಪರಿಹಾರವೂ ಇಲ್ಲ, ರೈತರ ಕಷ್ಟ ಹೇಳತೀರದ್ದಾಗಿದ್ದು ಇದರಿಂದ ಬೆಳಗಾವಿಯಲ್ಲಿ ರೈತರು ಇಂದು ಬೀದಿಗಿಳಿದಿದ್ದರು.

ಜಿಲ್ಲೆಯ ರೈತರು ಮತ್ತು ವಿವಿಧ ಮಠಾಧೀಶರು ಹಲವು ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಹೊರಾಟಕ್ಕಿಳಿದಿದ್ದರು. ಬರಗಾಲದ ಪರಿಹಾರ ನೀಡಬೇಕು, ಸಾಲ ಮನ್ನಾ ಮಾಡಬೇಕು, ಘಟಪ್ರಭಾ ನದಿಯಿಂದ ಎಡ ಹಾಗೂ ಬಲದಂಡೆ ಕಾಲುವೆಗೆ ನೀರು ಹರಿಸಬೇಕು ಮುಖ್ಯವಾಗಿ ಜಾನುವಾರುಗಳಿಗೆ ನೀರು ಹಾಗೂ ಮೇವಿನ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿ ಇಂದು ಹೋರಾಟ ಆರಂಭಿಸಿದ್ದರು. ಬೆಳಗಾವಿಯ ಚನ್ನಮ್ಮ ವೃತ್ತದಿಂದ ಹೋರಾಟ ಆರಂಭಿಸಿದ ರೈತರು ಡಿಸಿ ಕಚೇರಿವರೆಗೂ ಪ್ರತಿಭಟನಾರ್ಯಾಲಿ ನಡೆಸಿದರು.

ರೈತರು ಹೋರಾಟ ಮಾಡುವ ವಿಚಾರ ತಿಳಿದು ಡಿಸಿ ಕಚೇರಿ ಬಳಿ ಬ್ಯಾರಿಕೇಡ್ ಹಾಕಿ ಯಾರು ಒಳ ಬಾರದಂತೆ ತಡೆದಿದ್ದರು. ಇದನ್ನು ಗಮನಿಸಿದ ರೈತರು ಆಕ್ರೋಶಗೊಂಡು ಬ್ಯಾರಿಕೇಡ್ ತಳ್ಳಿ ಗೇಟ್ ಹಾರಿ ಡಿಸಿ ಕಚೇರಿಗೆ ಮುತ್ತಿಗೆ ಹಾಕಿದರು. ಈ ವೇಳೆ ರೈತರು ಮತ್ತು ಪೊಲೀಸರ ನಡುವೆ ತಳ್ಳಾಟ ನೂಕಾಟ ಉಂಟಾಯಿತು. ಇದೇ ವೇಳೆ ಡಿಸಿಪಿ ರೋಹನ್ ಜಗದೀಶ್ ರೈತರನ್ನು ತಳ್ಳಿದರು ಎಂಬ ಕಾರಣಕ್ಕೆ ಆಕ್ರೋಶಗೊಂಡ ರೈತರು ಕಚೇರಿ ಎದುರಿನ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಸಾಲಮನ್ನಾ ಮಾಡಲು ಸುಗ್ರವಾಜ್ಞೆ ಹೊರಡಿಸುವಂತೆ ರೈತರು ಪಟ್ಟು ಹಿಡಿದರು. ಆಗ ಇದು ಸರ್ಕಾರದ ಮಟ್ಟದಲ್ಲಿ ನಡೆಯುವ ಕೆಲಸ ನಿಮ್ಮ ಮನವಿಯನ್ನು ಸರ್ಕಾರಕ್ಕೆ ಕಳುಹಿಸುತ್ತೇವೆ ಎಂದು ಹೇಳಿದರು. ಬ್ಯಾಂಕ್ಗಳಿಂದ ಸಾಲ ಮರುಪಾವತಿ ಮಾಡುವಂತೆ ಕಿರುಕುಳ ನೀಡಲಾಗುತ್ತಿದ್ದು ಅದರ ಬಗ್ಗೆ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಇತ್ತ ಮೇವಿನ ವ್ಯವಸ್ಥೆ, ನೀರಿನ ವ್ಯವಸ್ಥೆ ಮಾಡುತ್ತೇವೆ ಎಂದು ಭರವಸೆಯನ್ನ ಡಿಸಿ ನೀಡಿದರು.

ಆದರೆ ಘಟಪ್ರಭಾ ಎಡದಂಡೆ ಮತ್ತು ಬಲದಂಡೆ ಕಾಲುವೆಗೆ ನೀರು ಹರಿಸಲು ಡಿಮ್ಯಾಂಡ್ ಇದ್ದು ಅದನ್ನು ಕೂಡ ಪ್ರಾದೇಶಿಕ ಆಯುಕ್ತರ ಗಮನಕ್ಕೆ ತಂದು ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ತಮ್ಮ ಬೇಡಿಕೆ ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡುವುದಾಗಿ ರೈತ ಮುಖಂಡರು ಎಚ್ಚರಿಸಿದ್ದಾರೆ.

ಕರ್ನಾಟಕಕ್ಕೆ ಬಂದು ಮತ ಕೇಳಲು ಅಮಿತ್ ಶಾಗೆ ಯಾವ ನೈತಿಕತೆ ಇದೆ: ಸಿಎಂ ಸಿದ್ದರಾಮಯ್ಯ

ಮೈಸೂರು: ರಾಜ್ಯಕ್ಕೆ ಅಮಿತ್ ಶಾ, ಜೆ ಪಿ ನಡ್ಡಾ, ಪ್ರಧಾನಿ ಮೋದಿಯವರು ಯಾರೇ ಬರಲಿ ಮತದಾರರ ಮನ ಗೆಲ್ಲಲು ಸಾಧ್ಯವಾಗುವುದಿಲ್ಲ. ಅಮಿತ್ ಶಾ ಅವರು ಉನ್ನತ ಮಟ್ಟದ ಸಮಿತಿಯ ಅಧ್ಯಕ್ಷರು, ಕರ್ನಾಟಕಕ್ಕೆ ಬರ ಪರಿಹಾರ ಹಣ ನೀಡಿದ್ದಾರೆಯೇ, ಕರ್ನಾಟಕಕ್ಕೆ ಬಂದು ಮತ ಕೇಳಲು ಅವರಿಗೆ ಯಾವ ನೈತಿಕತೆ ಇದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.

ಮೈಸೂರಿನಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿರುವ ಮಾಜಿ ಸಿಎಂ ಹೆಚ್ ಡಿ ಕುಮಾರಸ್ವಾಮಿಯವರು ಬಿಜೆಪಿ ಹೈಕಮಾಂಡ್ ಬಳಿ ಕರ್ನಾಟಕಕ್ಕೆ ಬರ ಪರಿಹಾರ ಕೊಡಿ ಎಂದು ಕೇಳಬೇಕಲ್ಲವೇ, ಮೇಕೆದಾಟುಗೆ ಅನುಮತಿ ಕೊಟ್ಟಿದ್ದಾರೆಯೇ, ಮಹದಾಯಿಗೆ ಪರಿಸರ ಇಲಾಖೆಯಿಂದ ಅನುಮತಿ ನೀಡಿದ್ದಾರೆಯೇ, ಭದ್ರಾ ಮೇಲ್ದಂಡೆ ಯೋಜನೆಗೆ ಹಣ ಬಿಡುಗಡೆ ಮಾಡಿದ್ದಾರೆಯೇ 15ನೇ ಹಣಕಾಸು ಆಯೋಗ ಶಿಫಾರಸು ಮಾಡಿರುವ ಪರಿಹಾರ ಕೊಟ್ಟಿದ್ದಾರೆಯೇ ಎಂದು ಸರಣಿ ಪ್ರಶ್ನೆಗಳನ್ನು ಸಿಎಂ ಕೇಳಿದರು.

ನಾವು ಕೇಂದ್ರ ಸರ್ಕಾರಕ್ಕೆ ಮೂರು ಮನವಿ ಪತ್ರಗಳನ್ನು ಕೊಟ್ಟೆವು. ಕೇಂದ್ರ ತಂಡ ಬಂದು ಬರ ಅಧ್ಯಯನ ನಡೆಸಿತು. ನಾನು ಡಿಸೆಂಬರ್ ನಲ್ಲಿ ಪ್ರಧಾನಿ

ಮೋದಿ ಮತ್ತು ಅಮಿತ್ ಶಾ ಅವರನ್ನು ಭೇಟಿ ಮಾಡಿ ರಾಜ್ಯಕ್ಕೆ ಹಣ ಬಿಡುಗಡೆ ಮಾಡಿ ಎಂದು ಮನವಿ ಮಾಡಿದ್ದೆ. ಡಿಸೆಂಬರ್ 23ನೇ ತಾರೀಖಿಗೆ ಸಭೆ ಕರೆದು ತೀರ್ಮಾನ ಮಾಡುತ್ತೇವೆ ಎಂದರು. ಆದಾಗಿ 5 ತಿಂಗಳಾದರೂ ಕರ್ನಾಟಕಕ್ಕೆ ಬರ ಪರಿಹಾರಕ್ಕ ಒಂದು ರೂಪಾಯಿನೂ ನೀಡಿಲ್ಲ ಎಂದು ಆರೋಪಿಸಿದರು.

ಸರಣಿ ಟ್ವೀಟ್ ಮೂಲಕ ಅಮಿತ್ ಶಾಗೆ ಪ್ರಶ್ನೆಗಳ ಸುರಿಮಳೆ: ಈ ಬಗ್ಗೆ ಇಂದು ಸರಣಿ ಟ್ವೀಟ್ ಮೂಲಕ ಸಿದ್ದರಾಮಯ್ಯನವರು ನೇರವಾಗಿ ಕೇಂದ್ರ ಸಚಿವ ಅಮಿತ್ ಶಾ ವಿರುದ್ಧ ಟೀಕೆ ಮಾಡಿದ್ದಾರೆ. ಅಮಿತ್ ಶಾ ಅವರು ಇಂದು ಬೆಂಗಳೂರಿಗೆ ಆಗಮಿಸಿ ಸಭೆ ನಡೆಸುತ್ತಿರುವ ಹೊತ್ತಿನಲ್ಲಿ ಪ್ರಶ್ನೆಗಳನ್ನು ಅವರ ಮುಂದಿಟ್ಟಿದ್ದಾರೆ.

ಗೃಹ ಸಚಿವ ಅಮಿತ್ ಶಾ ಅವರೇ, ಕರ್ನಾಟಕದಲ್ಲಿ ಮತಕೇಳುವ ಮೊದಲು ಕನ್ನಡಿಗ ಮತದಾರರ ಪ್ರಶ್ನೆಗಳಿಗೆ ಉತ್ತರಿಸಿ.ರಾಷ್ಟ್ರೀಕೃತ ಬ್ಯಾಂಕ್, ರೈಲ್ವೆ ಇಲಾಖೆ ಸೇರಿದಂತೆ ಕೇಂದ್ರ ಸರ್ಕಾರದ ಸ್ವಾಮ್ಯದ ಎಲ್ಲ ಸಂಸ್ಥೆಗಳ ನೇಮಕಾತಿ ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನೂ ಮಾಧ್ಯಮವಾಗಿ ಬಳಸಲು ಅವಕಾಶ ಇರಬೇಕೆಂಬುದು ಕನ್ನಡಿಗರ ಬಹುವರ್ಷಗಳ ಬೇಡಿಕೆ. ಈ ಅವಕಾಶದಿಂದ ವಂಚಿತರಾದ ಉದ್ಯೋಗಾರ್ಥಿ ಕನ್ನಡಿಗ ಯುವಕ-ಯುವತಿಯರು ಉದ್ಯೋಗದಿಂದಲೂ ವಂಚಿತರಾಗಿ ನಿರುದ್ಯೋಗಿಗಳಾಗುತ್ತಿದ್ದಾರೆ. ಇದಕ್ಕೆ ನೀವೇ ಹೊಣೆ ಅಲ್ಲವೇ? ಹಿಂದಿ ಎನ್ನುವುದು ರಾಷ್ಟ್ರಭಾಷೆ ಎನ್ನುವ ಸುಳ್ಳನ್ನು ಮತ್ತೆ ಮತ್ತೆ ಹೇಳಿ ಆ ಭಾಷೆಯನ್ನು ಕನ್ನಡಿಗರ ಮೇಲೆ ಹೇರುತ್ತಿರುವುದು ಯಾಕೆ? ಹಿಂದಿ ರಾಷ್ಟ್ರಭಾಷೆ ಎನ್ನುವುದನ್ನು ಸಂವಿಧಾನ ಹೇಳಿದೆಯೇ , ಹೇಳಿದ್ದರೆ ಸಂವಿಧಾನದ ಯಾವ ಪರಿಚ್ಛೇದಲ್ಲಿ ಹೇಳಲಾಗಿದೆ? ದಯವಿಟ್ಟು ಅದನ್ನು ಕನ್ನಡಿಗರ ಮುಂದೆ ತೆರೆದಿಡಿ ಎಂದು ಕೇಳಿದ್ದಾರೆ.

ಆಗುಂಬೆ ಬಳಿ 15 ಅಡಿ ಉದ್ದದ ಅಪರೂಪದ ಕಾಳಿಂಗ ಸರ್ಪ ರಕ್ಷಣೆ

ಶಿವಮೊಗ್ಗ: ಉಡುಪಿ ಜಿಲ್ಲೆಯ ಹೆಬ್ರಿ ತಾಲೂಕಿನ ನಾಡಪಾಲ್ ಗ್ರಾಮದಲ್ಲಿ ಸುಮಾರು 12.5 ಕೆಜಿ ತೂಕದ ಮತ್ತು ಬರೋಬ್ಬರಿ 15 ಅಡಿ ಉದ್ದದ ಅಪರೂಪದ ಕಾಳಿಂಗ ಸರ್ಪವೊಂದನ್ನು ರಕ್ಷಣೆ ಮಾಡಲಾಗಿದೆ.

ಕಾಳಿಂಗ ಸರ್ಪವನ್ನು ಹರ್ಪಿಟಾಲಜಿಸ್ಟ್ ಡಾ.ಪಿ.ಗೌರಿ ಶಂಕರ್ ಅವರು ರಕ್ಷಣೆ ಮಾಡಿದ್ದಾರೆ. ಕಿಂಗ್ ಕೋಬ್ರಾ ವಿಶ್ವದ ಅತಿ ಉದ್ದದ ವಿಷಪೂರಿತ ಹಾವುಗಳಾಗಿದ್ದು, ದಕ್ಷಿಣ ಮತ್ತು ಆಗ್ನೇಯ ಏಷ್ಯಾದಲ್ಲಿ ಈ ಹಾವುಗಳು ಹೆಚ್ಚಾಗಿ ಕಂಡು ಬರುತ್ತವೆ. ಥೈಲ್ಯಾಂಡ್‌ನಲ್ಲಿ 18 ಅಡಿಗಳಷ್ಟು ಉದ್ದವನ್ನು ಹಾವುಗಳಿವೆ. ಆದರೆ ಪ್ರಸ್ತುತ ಆಗುಂಬೆ

ಬಳಿ ಪತ್ತೆಯಾಗಿರುವುದು ಭಾರತದಲ್ಲಿ ಅಪರೂಪದ ಹಾವುಗಳಾಗಿವೆ.

ಫೆಬ್ರುವರಿಯಿಂದ ಮೇ ತಿಂಗಳು ಸಂತಾನೋತ್ಪತ್ತಿ ಅವಧಿಯಾಗಿದ್ದು, ಈ ಹಾವುಗಳು ತನ್ನ ಸಂಗಾತಿಯನ್ನು ಅರಸಿ ಹೊರಬರುತ್ತವೆ. ಇದರಿಂದಾಗಿ ಈ ಸಂದರ್ಭದಲ್ಲಿ ಮಾನವ-ಹಾವುಗಳ ಸಂಘರ್ಷ ಹೆಚ್ಚಾಗುತ್ತದೆ.

ಈ ಸಂದರ್ಭದಲ್ಲಿ ಕಳಿಂಗ ಫೌಂಡೇಶನ್‌ಗೆ ಹೆಚ್ಚಿನ ಕರೆಗಳು ಬರುತ್ತವೆ ಎಂದು ಡಾ ಶಂಕರ್ ಹೇಳಿದ್ದಾರೆ.

ಆಗುಂಬೆಯಿಂದ ಸುಮಾರು 35 ಕಿಲೋಮೀಟರ್ ದೂರದಲ್ಲಿರುವ ನಾಡ್ಪಾಲ್ ಗ್ರಾಮದ ಭಾಸ್ಕರ್ ಶೆಟ್ಟಿ ಎಂಬವರಿಂದ ಕರೆ ಬಂದಿತ್ತು. ಈ ವೇಳೆ ಪ್ರಶಾಂತ್ ಅವರೊಂದಿಗೆ ಸ್ಥಳಕ್ಕೆ ತೆರಳಿದಾಗ ಹಾವನ್ನು ಕಂಡು ಬೆರಗಾಗಿದೆ.

ಈ ಹಾವುಗಳ ಸರಾಸರಿ ತೂಕವು ಸಾಮಾನ್ಯವಾಗಿ 3.5 ರಿಂದ 7 ಕಿಲೋಗ್ರಾಂಗಳವರೆಗೆ ಇರುತ್ತದೆ, ಹೆಣ್ಣು 2 ರಿಂದ 3.5 ಕಿಲೋಗ್ರಾಂಗಳಷ್ಟು ಮತ್ತು ಗಂಡು 3.5 ರಿಂದ 6 ಕಿಲೋಗ್ರಾಂಗಳಷ್ಟು ತೂಕವಿರುತ್ತದೆ. ಆದರೆ, ಪ್ರಸ್ತುತ ರಕ್ಷಣೆ ಮಾಡಿದ ಹಾವು 12.5 ಕಿಲೋಗ್ರಾಂಗಳಷ್ಟು ತೂಕವನ್ನು ಹೊಂದಿದ್ದು, ಸುಮಾರು 15 ಅಡಿ ಉದ್ದವಿದೆ. ಇಷ್ಟು ದೊಡ್ಡ ಗಾತ್ರದ ಕಾಳಿಂಗ ಸರ್ಪ ಇಡೀ ಭಾರತದಲ್ಲೇ ಸಿಗುವುದು ಅಪರೂಪ.

ಈ ಹಾವುಗಳ ಪತ್ತೆ ಮಲೆನಾಡು ಪ್ರದೇಶದಲ್ಲಿ ಬೆಳೆಯುತ್ತಿರುವ ಆರೋಗ್ಯಕರ ಬೆಳವಣಿಗೆಯನ್ನು ತೋರಿಸುತ್ತದೆ ಎಂದು ಶಂಕರ್ ಅವರು ತಿಳಿಸಿದ್ದಾರೆ.

ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿ ವಿಚಾರದಲ್ಲಿ ಬೆಂಬಲ ಕೊಟ್ಟ ವ್ಯಕ್ತಿ ನಾನು: ಜಗದೀಶ್ ಶೆಟ್ಟರ್

ಬೆಳಗಾವಿ: ಪಂಚಮಸಾಲಿ ಸಮಾಜಕ್ಕೆ 2 ಎ ಮೀಸಲಾತಿ ನೀಡುವ ವಿಚಾರದಲ್ಲಿ ಸಂಪೂರ್ಣ ಬೆಂಬಲ ಕೊಟ್ಟ ವ್ಯಕ್ತಿ ನಾನು. ಹೀಗಿರುವಾಗ ನಾನು ಇದಕ್ಕೆ ವಿರೋಧ ಮಾಡುವ ಪ್ರಶ್ನೆಯೇ ಬರುವುದಿಲ್ಲ. ಚುನಾವಣೆಯ ವೇಳೆ ಇಂತಹ ಅಪಪ್ರಚಾರಗಳು ನಡೆಯುತ್ತಲೇ ಇರುತ್ತವೆ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ತಮ್ಮ ವಿರೋಧಿಗಳಿಗೆ ತಿರುಗೇಟು ನೀಡಿದರು.

ಬೆಳಗಾವಿಯಲ್ಲಿ ಸೋಮವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪ್ರತಿಪಕ್ಷಗಳು ಈ ವಿಷಯದಲ್ಲಿ ಮತದಾರರನ್ನು ದಾರಿ ತಪ್ಪಿಸುತ್ತಿವೆ ಎಂದು ಆರೋಪಿಸಿದರು.

ಬೆಳಗಾವಿ ಕ್ಷೇತ್ರದಲ್ಲಿ ಬಿಜೆಪಿ ಮುಖಂಡರಾದ ಮಾಜಿ ಸಚಿವ ಮುರುಗೇಶ್ ನಿರಾಣಿ ಮತ್ತು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ನನ್ನ ಪ್ರಚಾರ ಮತ್ತು ರ್ಯಾಲಿಗಳಲ್ಲಿ ಭಾಗವಹಿಸಿ ಬೆಂಬಲ ನೀಡಲಿದ್ದಾರೆ ಎಂದರು.

ಈಗಾಗಲೇ ಗೋಕಾಕ ಮತ್ತು ಅರಭಾವಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರಚಾರ ಆರಂಭಿಸಿದ್ದೇನೆ. ಜಾರಕಿಹೊಳಿ ಸಹೋದರರು ನನಗೆ ಸಂಪೂರ್ಣ ಬೆಂಬಲ ನೀಡಿದ್ದಾರೆ.

ಈ ಕ್ಷೇತ್ರಗಳಿಂದ ಹೆಚ್ಚಿನ ಮತಗಳ ಮುನ್ನಡೆಯನ್ನು ನಾನು ನಿರೀಕ್ಷಿಸುತ್ತಿದ್ದೇನೆ ಎಂದು ಅವರು ಹೇಳಿದರು.

ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿ ಮಾಡಲು ಈ ಚುನಾವಣೆ ನಡೆಯುತ್ತಿದೆ. ಸ್ವಯಂ ಪ್ರೇರಿತ ನಾಗರಿಕರು ಮೋದಿ ಮತ್ತೊಮ್ಮೆ ಪ್ರಧಾನಿಯಾಗಲಿ ಎಂದು ಪ್ರಾರ್ಥಿಸುತ್ತಿದ್ದಾರೆ ಮತ್ತು ಹಾರೈಸುತ್ತಿದ್ದಾರೆ ಎಂದು ಅವರು ಹೇಳಿದರು. ಪ್ರಧಾನಿ ನರೇಂದ್ರ ಮೋದಿ ಅವರ ಸಾಧನೆಯ ಬಗ್ಗೆ ದಾಖಲೆ ಕೊಡುತ್ತಿದ್ದೇವೆ. ನಮ್ಮ ಶಾಸಕರು, ಸಂಸದರು ಏನು ಕೆಲಸ ಮಾಡಿದ್ದಾರೆ ಎಂಬುದು ಜನರಿಗೆ ಗೊತ್ತಿದೆ. ವಿನಾಕಾರಣ ರಾಜಕೀಯ ಮಾಡುವದು ಸರಿಯಲ್ಲ ಎಂದು ಕಾಂಗ್ರೆಸ್ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದರು.

ಮುಂದಿನ ವರ್ಷ ನೂತನ ಜೋಡಿ ರಥಗಳು ಸಿದ್ಧ

ಮರಿಯಮ್ಮನಹಳ್ಳಿ: 'ಪಟ್ಟಣದ ಆರಾಧ್ಯ ದೈವಗಳಾದ ಶ್ರೀಲಕ್ಷ್ಮಿನಾರಾಯಣಸ್ವಾಮಿ ಹಾಗೂ ಆಂಜನೇಯಸ್ವಾಮಿಯ ನೂತನ ಜೋಡಿ ರಥಗಳ ನಿರ್ಮಾಣ ಕಾರ್ಯ ಭರದಿಂದ ಸಾಗಿದ್ದು, ಮುಂದಿನ ವರ್ಷದ ಶ್ರೀರಾಮನವಮಿಯಂದು ನಡೆಯುವ ಜೋಡಿ ರಥೋತ್ಸವ ಸಂದರ್ಭಕ್ಕೆ ರಥಗಳು ಸಿದ್ಧವಾಗಲಿವೆ' ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಹೇಳಿದರು.

ಪಟ್ಟಣದಲ್ಲಿ ನಿರ್ಮಾಣ ಮಾಡುತ್ತಿರುವ ನೂತನ ಜೋಡಿ ರಥಗಳ ಕಾಮಗಾರಿಯನ್ನು ಶನಿವಾರ ವೀಕ್ಷಿಸಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.' ಜೋಡಿ ರಥೋತ್ಸವಗಳು ಸುಮಾರು ಆರು ನೂರು ವರ್ಷಗಳಷ್ಟು ಹಳೆಯದಾಗಿದ್ದು, ಭಕ್ತರ ಹಾಗೂ ದಾನಿಗಳ ಸಹಾಯ ಹಾಗೂ ಸಹಕಾರದಲ್ಲ

ಪ್ರಿಯಂಕಾ–ಮೃಣಾಲ್ ಭರ್ಜರಿ ಗೆಲುವಿಗೆ ಪಣ: ಸಚಿವ ಸತೀಶ್ ಜಾರಕಿಹೊಳಿ

ರಾಯಬಾಗದಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆ; ಕಾಂಗ್ರೆಸನಲ್ಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲವೆಂದ ಸಾಹುಕಾರ್

ಬೆಳಗಾವಿ: ಚಿಕ್ಕೋಡಿಯಲ್ಲಿ ಪ್ರಿಯಂಕಾ, ಬೆಳಗಾವಿಯಿಂದ ಮೃಣಾಲ್ ಗೆಲುವಿಗೆ ಜಿಲ್ಲೆಯ ನಾಯಕರೆಲ್ಲರೂ ಸೇರಿ ಪಣ ತೊಟ್ಟಿದೇವೆ. ಅಲ್ಲದೇ ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲ. ಅದಕ್ಕಾಗಿಯೇ ಸಚಿವೆ ಲಕ್ಷ್ಮೀ, ಶಾಸಕರಾದ ಸವದಿ, ರಾಜು ಕಾಗೆ, ಮಹೇಂದ್ರ ತಮ್ಮನ್ನವರ್ ಸೇರಿದಂತೆ ಎಲ್ಲಾ ಮುಖಂಡರು ಸೇರಿದ್ದೇವೆಂದು ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

ರಾಯಬಾಗ ಪಟ್ಟಣದ ಮಹಾವೀರ ಭವನದಲ್ಲಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರ ಪರ ಹಮ್ಮಿಕೊಂಡಿದ್ದ ರಾಯಬಾಗ ಮತಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರ ಸಭೆ ಉದ್ದೇಶಿಸಿ ಅವರು ಮಾತನಾಡಿ, ಕೇಂದ್ರದಲ್ಲಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ ಸಾಕಷ್ಟು ಜನಪರ ಕೆಲಸಗಳನ್ನು ಮಾಡಿದೆ. ಚುನಾವಣೆಯಲ್ಲಿ ನೀಡಿದ ಭರವಸೆಗಳನ್ನು ಈಡೇ–ರಿಸಿದ್ದೇವೆ. ರಾಯಬಾಗದಲ್ಲಿ ನೀರಾವರಿ ಯೋಜನೆಗಳನ್ನು ಮಾಡಲು ಮತದಾರರು ಬೇಡಿಕೆ ಇಟ್ಟಿದ್ದಾರೆ. ಈಗಾಗಲೇ ಶಾಹು ಮಾಹಾರಾಜ ಏತ ನೀರಾವರಿ ಯೋಜನೆಗೆ ಈಗಾಗಲೇ ಯೋಜನೆ ರೂಪಿಸಿದ್ದೇವೆ.

ನಾವು ಯಾರ ಬಗ್ಗೆ ಆರೋಪ, ಅಥವಾ ಮಾತನಾಡು ಕೆಲಸವನ್ನು ರಾಜಕಾರಣದಲ್ಲಿ ಯಾವತ್ತೂ ಮಾಡಿಲ್ಲ. ಮುಂದೆಯೂ ಮಾಡಲ್ಲ. ನಮ್ಮದೇನಿದ್ದರೂ ಅಭಿವೃದ್ಧಿ ಪರ ರಾಜಕಾರಣಕ್ಕೆ ಹೆಚ್ಚುಆದ್ಯತೆ ನೀಡುತ್ತೇವೆ ಎಂದು ಹೇಳಿದರು.

ಮಾಜಿ ಡಿಸಿಎಂ, ಶಾಸಕ ಲಕ್ಷ್ಮಣ ಸವದಿ ಮಾತನಾಡಿ, ಚಿಕ್ಕೋಡಿ ಲೋಕಸಭೆ ಕ್ಷೇತ್ರದಿಂದ ಜಿಲ್ಲೆಯ ಎಲ್ಲಾ ಮುಖಂಡರು ಸೇರಿ ಸರ್ವಾನುಮತದಿಂದ ಪ್ರಿಯಂಕಾ ಜಾರಕಿಹೊಳಿ ಅವರನ್ನು ಅಭ್ಯರ್ಥಿಯಾಗಿ ಆಯ್ಕೆ ಮಾಡಿದ್ದು, ಅವರನ್ನು ಗೆಲ್ಲಿಸಿ, ಲೋಕಸಭೆಗೆ ಕಳುಹಿಸಿದರೆ ಎಲ್ಲರಿಗೂ ಶ್ರೇಯಸ್ಸು ಸಿಗಲಿದೆ ಎಂದ ಅವರು, ರಾಯಬಾಗ ವಿಧಾನಸಭೆ ಕ್ಷೇತ್ರದಲ್ಲಿ ಇನ್ನುವರೆಗೆ ಬೂತ್ ಗಳನ್ನು ರಚನೆ ಮಾಡಿಲ್ಲ.

ಕಾರಣ ಬೂತ್ ಗಳನ್ನು ರಚಿಸಿ ಚುನಾವಣೆ ಎದುರಿಸಲು ಸಿದ್ದತೆ ಮಾಡಿಕೊಳ್ಳಬೇಕೆಂದು ಸಲಹೆ

ನೀಡಿದರು.

ರಾಜ್ಯ ಸರ್ಕಾರದ ಯೋಜನೆಗಳನ್ನು ಜನತೆಗೆ ತಿಳಿಸುವ ಕೆಲಸ ಬೂತ್ ಮಟ್ಟದ ಕಾರ್ಯಕರ್ತರು ಮಾಡಬೇಕು. ಪ್ರಿಯಂಕಾ ಜಾರಕಿಹೊಳಿ ಅವರ ಗೆಲುವಿಗೆ ಕಾಗವಾಡ, ಅಥಣಿಯಲ್ಲಿ ಹೆಚ್ಚಿನ ಮತಗಳನ್ನು ನಾವು ನೀಡುತ್ತೇವೆ. ರಾಯಬಾಗ, ಕುಡುಚಿಯಲ್ಲಿ ಮತ ಪಡೆಯಲು ನೀವು ಪ್ರಯತ್ನಿಸಿ, ಚಿಕ್ಕೋಡಿ ಕ್ಷೇತ್ರದಿಂದ ಪ್ರಿಯಂಕಾ ಗೆದ್ದು ಲೋಕಸಭೆಗೆ ಕಳುಹಿಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು ಹುಬ್ಬೆರಿಸುವಂತೆ ನೋಡಬೇಕು ಎಂದರು.

ಶಾಸಕ ಮಹೇಂದ್ರ ತಮ್ಮನ್ನವರ್ ಮಾತನಾಡಿ, ಕುಡಚಿ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಹೆಚ್ಚಿನ ಮತಗಳನ್ನು ನೀಡಲು ನಾನು ಶ್ರಮಿಸುತ್ತೇನೆ. ಬಿಜೆಪಿಯ ಸುಳ್ಳು ಪ್ರಚಾರಕ್ಕೆ ಮರುಳಾಗದೆ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಲು ಮತದಾರರು ಮುಂದಾಗಬೇಕು. ಶಾಸಕ ರಾಜು ಕಾಗೆ, 2014 ರಲ್ಲಿ ಜನ ಬದಲಾವಣೆ ತರಬೇಕೆಂದು ಪ್ರಧಾನಿ ಮೋದಿ ಮಾತಿಗೆ ಮರುಳಾಗಿ ದೇಶದಲ್ಲಿ ಬಿಜೆಪಿಗೆ ಅಧಿಕಾರ ನೀಡಿದರು. ಆದರೆ 10 ವರ್ಷ ಆಡಳಿತ ನಡೆಸಿದ ಕೇಂದ್ರ ಬಿಜೆಪಿ ಸರ್ಕಾರ ರೈತರ, ಬಡವರ, ದೀನ ದಲಿತರಿಗೆ ಯಾವುದೇ ರೀತಿಯ ಸ್ಪಂದನೆ ನೀಡಲಿಲ್ಲ ಎಂದು ಬಿಜೆಪಿ ವಿರುದ್ಧ ಆರೋಪಿಸಿದ ಅವರು, ಈ ಬಾರಿ ಪ್ರಿಯಂಕಾ ಜಾರಕಿಹೊಳಿ 2ಲಕ್ಷ ಮತಗಳಿಂದ ಗೆಲ್ಲುವುದರಲ್ಲಿ ಯಾವುದೇ ಸಂದೇಹವಿಲ್ಲ. ನಿಮ್ಮ ನಿಮ್ಮ ಬೂತ್ ಮಟ್ಟದಲ್ಲಿ ಸರಿಯಾಗಿ ಕೆಲಸ ಮಾಡಿದರೆ ಖಂಡಿತವಾಗಿ ನಮ್ಮ ಅಭ್ಯರ್ಥಿ ಜಯ ಸಾಧಿಸುತ್ತದೆ ಎಂದು ಹೇಳಿದರು.ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ, ಬೆಳಗಾವಿ ಬೂಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ ಹಾಗೂ ಮಾಜಿ ಸಚಿವ ಎ.ಬಿ. ಪಾಟೀಲ್ ಮಾತನಾಡಿ, ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ನೀಡಿ 136 ಸೀಟು ಗೆಲ್ಲಿಸಿದಿರಿ, ಲೋಕಸಭೆ ಚುನಾವಣೆಯಲ್ಲಿಯೂ ಕಾಂಗ್ರೆಸ್ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಗೆಲ್ಲಿಸಬೇಕೆಂದು ಮತದಾರರಲ್ಲಿ ಮನವಿ ಮಾಡಿದರು.

ಚಿಕ್ಕೋಡಿ ಲೋಕಸಭೆ ಕ್ಷೇತ್ರದ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮಾತನಾಡಿ, ನನ್ನನ್ನು ಪ್ರೀತಿಯಿಂದ ರಾಯಬಾಗ ಪಟ್ಟಣಕ್ಕೆ ಸ್ವಾಗತಿಸಿದ ಎಲ್ಲರಿಗೂ ಧನ್ಯವಾದಗಳು. ರಾಜ್ಯ ಸರ್ಕಾರ ಸರ್ವರಿಗೂ ಗ್ಯಾರಂಟಿ ಯೋಜಗೆಳನ್ನು ನೀಡಿದ್ದು, ನಿಮ್ಮ ಪ್ರಗತಿಗೆ ಕಾಂಗ್ರೆಸ್ ಪಕ್ಷ ಶ್ರಮಿಸುತ್ತದೆ. ಕಾರಣ ಲೋಕಸಭೆ ಚುನಾವಣೆಯಲ್ಲಿ ನನಗೆ ಹೆಚ್ಚಿನ ಸಂಖ್ಯೆಯ ಮತಗಳನ್ನು ನೀಡಿ ಆರ್ಶೀವದಿಸಿ ಎಂದು ಮನವಿ ಮಾಡಿದರು.

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿ, ರಾಯಬಾಗ ಪಟ್ಟಣದಲ್ಲಿ ಇಂದು ವಿಜಯೋತ್ಸವದ ವಾತಾವರಣ ನೋಡಿದ್ದೇನೆ. ಕಾರಣ ನಿವೇಲ್ಲ ಸೇರಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸಬೇಕೆಂದು ಮನವಿ ಮಾಡಿದ ಅವರು, ರಾಜ್ಯ ಸರ್ಕಾರವು ನಿಮ್ಮ ಸರ್ವ ರೀತಿಯ ಅಭಿವೃದ್ಧಿಗೆ ಶ್ರಮಿಸುತ್ತಿದೆ. ಗ್ಯಾರಂಟಿ ಯೋಜನೆಗಳನ್ನು ಈಡೇ–ರಿಸುವ ಮೂಲಕ ಕೊಟ್ಟ ಮಾತು ಉಳಿಸಿಕೊಂಡಿದ್ದೇವೆ ಎಂದರು.

ಬಿಜೆಪಿಯವರಿಗೆ ಬಡವರ, ರೈತರ ಕಾಳಜಿ ಇಲ್ಲಾ. ಅವರಿಗೆ ಏನೇ ಇದ್ದರೂ ಅದಾನಿ, ಅಂಬಾನಿಗಳ ಮೇಲೆ ಅಷ್ಟೇ ಕಾಳಜಿ ಇದೆ. ಅದಕ್ಕಾಗಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ, ಪ್ರಿಯಂಕಾಗೆ ಆಶೀರ್ವಾದ ಮಾಡಬೇಕೆಂದು ಮನವಿ ಮಾಡಿದರು.

ಸಚಿವ ಸತೀಶ್ ಜಾರಕಿಹೊಳಿ ಅವರು ತಮ್ಮ ಎರಡು ಮಕ್ಕಳನ್ನು ಸಮಾಜ ಸೇವೆಯಲ್ಲಿ ತೊಡಗಿಸಿದ್ದಾರೆ. ಅವರನ್ನು ರಾಜಕಾರಣದಲ್ಲಿ, ಸಮಾಜ ಸೇವೆಯಲ್ಲಿ ನೋಡಿದ್ದೇನೆ. ಆದರೆ ಇಂದು ತಂದೆಯ ಪಾತ್ರದಲ್ಲಿ ನೋಡಿದ್ದು ನನಗೆ ಬಹಳಷ್ಟು ಖುಷಿಯಾಗಿತು ಎಂದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ವೀರಕುಮಾರ್ ಪಾಟೀಲ್, ಯುವ ನಾಯಕ ರಾಹುಲ್ ಜಾರಕಿಹೊಳಿ, ಮಾಜಿ ಶಾಸಕ ಶ್ಯಾಮ್ ಘಾಟಗೆ, ಕಾಂಗ್ರೆಸ್ ಮುಖಂಡರಾದ ಮಹಾವೀರ ಮೋಹಿತೆ, ಅಪ್ತಾರ್ ಮುಲ್ಲಾ, ನಾಯಕವಾಡಿ, ಸಂಜು ಬಾನೆ, ಶಂಕರಗೌಡ ಪಾಟೀಲ್, ಅಪ್ಪಸಾಬ್ ಪಾಟೀಲ್, ರಾಜುಗೌಡ ಪಾಟೀಲ್ ಸೇರಿದಂತೆ ಸಾವಿರಾರು ಕಾಂಗ್ರೆಸ್ ಕಾರ್ಯಕರ್ತರು, ಮಹಿಳೆಯರು ಇದ್ದರು.

ಧುಪದಾಳ ಜಲಾಶಯಕ್ಕೆ ಭೇಟಿ ನೀಡಿ ನೀರಿನ ಮಟ್ಟ ಪರಿಶೀಲಿಸಿದ ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ಗೋಕಾಕ ತಾಲೂಕಿನ ಧುಪದಾಳ ಗ್ರಾಮದಲ್ಲಿ ಘಟಪ್ರಭಾ ಹಾಗೂ ಹಿರಣ್ಯಕೇಶಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಜಲಾಶಯಕ್ಕೆ ಸಚಿವ ಸತೀಶ ಜಾರಕಿಹೊಳಿ ಭೇಟಿ ನೀಡಿ, ನೀರಿನ ಸಂಗ್ರಹದ ಸಾಮರ್ಥ್ಯವನ್ನು ಪರಿಶೀಲಿಸಿದರು.

ಇದೇ ವೇಳೆ ನೀರಿನ ಸಂಗ್ರಹ ಹೆಚ್ಚಿಗೆ ಮಾಡಲು ಯೋಜನೆ ರೂಪಿಸಲು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ ಸಚಿವರು ಶೀಘ್ರದಲ್ಲೇ ಕಾಮಗಾರಿ ಪ್ರಾರಂಭಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಈ ಆಣೆಕಟ್ಟಿನ ಸಾಮರ್ಥ್ಯವನ್ನು ಹೆಚ್ಚಿಸುವುದ–ರಿಂದ ರೈತರು ಹಾಗೂ ಸಾರ್ವಜನಿಕರಿಗೆ ಇದರಿಂದ ತುಂಬಾ ಅನುಕೂಲವಾಗಲಿದೆ.

ಇದೇ ಸಂದರ್ಭದಲ್ಲಿ ಜನ–ಜಾನುವಾರುಗಳ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಏಪ್ರಿಲ್ 1 ರಿಂದ ಹಿಡಕಲ್ ಜಲಾಶಯದಿಂದ 2 ಟಿಎಂಸಿ ನೀರನ್ನು ಬಿಡುಗಡೆ ಮಾಡಲಾಗುತ್ತಿದೆ.

ಬೆಳಗಾವಿ ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಇರುವುದರಿಂದ ಹಾಗೂ ಮಳೆಯ ಕೊರತೆಯಿಂದಾಗಿ ಜನ–ಜಾನುವಾರುಗಳಿಗೆ ನೀರಿನ ಅಭಾವ ಉಂಟಾಗಿದ್ದು, ಹಿಡಕಲ್ ಜಲಾಶಯದಿಂದ ಘಟಪ್ರಭೆ ನದಿಗೆ ಕುಡಿಯುವ ಉದ್ದೇಶಕ್ಕಾಗಿ ಬಾಗಲಕೋಟ ಮತ್ತು ಮಾರ್ಗ ಮಧ್ಯದ ಹಳ್ಳಿಗಳಿಗೆ ಸರ್ಕಾರದ ಆದೇಶದನ್ವಯ ಕಾಯ್ದಿ–ರಿಸಿದ 2.5 ಟಿ.ಎಂ.ಸಿ ನೀರನ್ನು ಹ–ರಿಸಲಾಗು ತ್ತಿದೆ.

ಸದ್ಯ ಬರಗಾಲವಿರುವ ಕಾರಣ ನೀರನ್ನು ಮಿತವಾಗಿ ಬಳಕೆ ಮಾಡಲು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಈ ವೇಳೆ ರಾಜು ದರ್ಗಶೆಟ್ಟಿ, ಮಹಾಂತೇಶ ಮಗದುಮ, ಅರೀಪ್ ಪೀರ್ಜಾದೆ, ರೆಹಮಾನ್ ಮೊಕಾಶಿ, ಆನಂದ ಕುಲಕರ್ಣಿ, ಬಿ.ಆರ್. ಕಳಸಾ, ವಿನೋದ ಎಚ್, ನಾಗೇಶ ಕೋಲಕಾರ, ಶಿವಕುಮಾರ್ ಸೇರಿದಂತೆ ಇತರರು ಇದ್ದರು.

ಬೆಳಗಾವಿ: ಪತ್ನಿ ಕೊಲೆ ಮಾಡಿದ ಪತಿಗೆ 10 ವರ್ಷ ಜೈಲು ಶಿಕ್ಷೆ

ಬೆಳಗಾವಿ: ತವರು ಮನೆಯಿಂದ ಬಂಗಾರ ಹಾಗೂ ನಗದು ತರಲು ಒಪ್ಪದ ಪತ್ನಿಯನ್ನು ಕೊಲೆ ಮಾಡಿದ ಪತಿಗೆ 20 ಸಾವಿರ ದಂಡ ಮತ್ತು 10 ವರ್ಷ ಜೈಲು ಶಿಕ್ಷೆ ವಿಧಿಸಿ ಬೆಳಗಾವಿಯ 6ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾ. ಎಚ್.ಎಸ್.ಮಂಜುನಾಥ ತೀಪು ಪ್ರಕಟಿಸಿದ್ದಾರೆ.

ಕುಲಗೋಡ ಠಾಣೆ ವ್ಯಾಪ್ತಿಯ ಬಿಸನಕೊಪ್ಪ ಗ್ರಾಮದ ರಮೇಶ ಬಸಪ್ಪ ಹೊಂಗಲ ಶಿಕ್ಷೆಗೆ ಗು–ರಿಯಾದ ವ್ಯಕ್ತಿ. ಈತನ ಪತ್ನಿ ಶ್ರೀದೇವಿ ರಮೇಶ ಹೊಂಗಲ ಹತ್ಯೆಯಾದವಳು. 2014 ಮೇ 19 ರಂದು ವಿವಾಹವಾಗಿದ್ದ ಇವರಿಗೆ 14 ತಿಂಗಳ ಗಂಡು ಮಗು ವಿದೆ. ಪತಿ ರಮೇಶ ಹೊಂಗಲ ಮದ್ಯ ಸೇವನೆ ಚಟ ಹೊಂದಿದ್ದ. ಇದರಿಂದ ಪತ್ನಿ ಶ್ರೀದೇವಿಗೆ ತವರು ಮನೆಯಿಂದ ಹಣ ಮತ್ತು ಬಂಗಾರವನ್ನು ವರದಕ್ಷಿಣೆ ತೆಗೆದುಕೊಂಡು ಬರುವಂತೆ ಕಿರುಕುಳ ನೀಡುತ್ತಿದ್ದ.

ಈ ವಿಷಯವನ್ನು ಶ್ರೀದೇವಿ ತಮ್ಮ ಕುಟುಂಬಸ್ಥ–ರಿಗೆ ತಿಳಿಸಿ ದ್ದರಿಂದ ತವರು ಮನೆಯವರು ಹಲವು ಬಾರಿ ಬುದ್ಧಿ ವಾದ ಹೇಳಿದ್ದರು. 2021 ಜ.12 ರಂದು ಮಧ್ಯಾಹ್ನ 2 ಗಂಟೆ ಸುಮಾ–ರಿಗೆ ಅಪರಾಧಿ ರಮೇಶ, ಖರ್ಚಿಗೆ ಹಣ ಇಲ್ಲ. ತವರು ಮನೆಯಿಂದ ಹಣ ಹಾಗೂ ಬಂಗಾರ ತೆಗೆದುಕೊಂಡು ಬರುವಂತೆ ಪೀಡಿಸಿದ್ದಾನೆ.

ಇದಕ್ಕೆ ಪತ್ನಿ ಶ್ರೀದೇವಿ ಒಪ್ಪದ್ದ–ರಿಂದ ಆಕ್ರೋಶಗೊಂಡು ಕೊಲೆ ಮಾಡುವ ಉದ್ದೇಶದಿಂದ ಸೀರೆಯಿಂದ ಅವಳ ಕುತ್ತಿಗೆ ಬಿಗಿದು ಉಸಿರುಗಟ್ಟಿಸಿ ಕೊಲೆ ಮಾಡಿದ್ದಾನೆ. ಘಟನೆ ಕುರಿತು ಪ್ರಕರಣ ದಾಖಲಿಸಿಕೊಂಡಿದ್ದ ಕುಲಗೋಡ ಠಾಣೆ ಪೊಲೀಸರು, ನ್ಯಾಯಾಲಯಕ್ಕೆ ದೋಷಾರೋಷ ಪಟ್ಟಿ ಸಲ್ಲಿಕೆ ಮಾಡಿದ್ದರು. ವಿಚಾರಣೆ ನಡೆಸಿದ ಬೆಳಗಾವಿ ಯ 6ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾ.ಎಚ್.ಎಸ್.ಮಂಜುನಾಥ ಅವರು, ಅಪರಾಧಿಗೆ 10 ವರ್ಷ ಸಾದಾ ಜೈಲು ಶಿಕ್ಷೆ ಮತ್ತು ರೂ 20 ಸಾವಿರ ದಂಡ ವಿಧಿಸಿ ತೀಪು ನೀಡಿದ್ದಾರೆ. ಈ ಪ್ರಕರಣದಲ್ಲಿ ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ನಸರೀನ ಬಂಕಾಪೂರ ವಕಾಲತ್ತು ವಹಿಸಿದ್ದರು.

ಮುರುಘಾ ಮಠದ ನೂತನ ಉಸ್ತುವಾರಿಯಾಗಿ ಬಸವಕುಮಾರ ಸ್ವಾಮೀಜಿ ನೇಮಕ

ಚಿತ್ರದುರ್ಗ: ಮುರುಘಾ ಮಠದ ನೂತನ ಉಸ್ತುವಾ–ರಿಯಾಗಿ ಬಸವಕುಮಾರ ಸ್ವಾಮೀಜಿ ನೇಮಕಗೊಂಡಿದ್ದಾರೆ. ಸರ್ವೋಚ್ಚ ನ್ಯಾಯಾಲಯದ ಆದೇಶದ ಮೇರೆಗೆ ಬಸವಕುಮಾರ ಸ್ವಾಮಿಜಿ ನೇಮಕವಾಗಿದ್ದಾರೆ.

ಬಸವಕುಮಾರ ಸ್ವಾಮೀಜಿ ವಿಜಯಪುರದ ವನಶ್ರೀ ಮಹಾ ಸಂಸ್ಥಾನದ ಪೀಠಾಧಿಪತಿ. ಹಂಪಿ ವಿಶ್ವ ವಿದ್ಯಾಲಯದಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿ ಎಚ್ ಡಿ ಪಡೆದಿದ್ದಾರೆ. ಮಠದ ಧಾರ್ಮಿಕ ಕಾರ್ಯಕ್ರಮಗಳ ಮುಂದುವರಿಕೆ ಮತ್ತು ಮೇಲುಸ್ತುವಾ–ರಿಗೆ ಬಸವಕುಮಾರ ಸ್ವಾಮೀಜಿಗೆ ಅಧಿಕಾರ ವಹಿಸಲಾಗಿದೆ.

ಮುರುಘಾ ಶರಣದ ಬಂಧನದ ನಂತರ ಶ್ರೀಮಠ ಹಾಗೂ ವಿದ್ಯಾಪೀಠದ ಮೇಲುಸ್ತುವಾರಿಯಾಗಿ ಬಸವಕುಮಾರ ಸ್ವಾಮೀಜಿ ನೇಮಕಗೊಂಡಿದ್ದಾರೆ. ಆದರೆ ಬಸವಕುಮಾರ ಸ್ವಾಮೀಜಿ ನೇಮಕ ಪ್ರಶ್ನಿಸಿ ಮಾಜಿ ಸಚಿವ ಎಚ್. ಏಕಾಂತಯ್ಯ ಸರ್ವೋಚ್ಚ ನ್ಯಾಯಾಲಯದ ಮೊರೆ ಹೋಗಿದ್ದರು.

ಮಠ ಹಾಗೂ SJM ವಿದ್ಯಾಪೀಠಕ್ಕೆ ಹೊಸ ಕಮಿಟಿ ರಚಿಸುವಂತೆ ಸರಕಾರಕ್ಕೆ ಸುಪ್ರೀಂ ಆದೇಶ ಹೊರಡಿಸಿದೆ. ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಹೊಸ ಕಮಿಟಿ ರಚನೆ ಮಾಡಿದೆ. ನಿವೃತ್ತ ಐಎಎಸ್ ಅಧಿಕಾರಿ ಶಿವಯೋಗಿ ಕಳಸದ್ ರನ್ನು ಆಡಳಿತಾಧಿಕಾರಿಯಾಗಿ ನೇಮಕ ಮಾಡಲಾಗಿದೆ.

ಎಸ್ಸೆಸ್ಸೆಲ್ಸಿ ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿದ ಜಿಪಂ ಸಿಇಒ ರಾಹುಲ್ ಶಿಂಧೆ

ಬೆಳಗಾವಿ: ನಗರ ವಲಯದ ಸೇಂಟ್ ಝೇವಿಯರ್ಸ್ ಪ್ರೌಢ ಶಾಲೆಯ ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷಾ ಕೇಂದ್ರಕ್ಕೆ ಮಂಗಳವಾರ ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಶಾಲೆಯಲ್ಲಿ ಅಳವಡಿಸಲಾದ ಸಿಸಿಟಿವಿಯನ್ನು ಪರಿಶೀಲನೆ ನಡೆಸಿದರು.

ಬಳಿಕ ಕೊಠಡಿಗಳಿಗೆ ಭೇಟಿ ನೀಡಿ ವೀಕ್ಷಿಸಿದರು. ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಸಮಸ್ಯೆ ಆಗದಂತೆ ಪರೀಕ್ಷೆಗೆ ಅನುಕೂಲ ಮಾಡಬೇಕು. ಯಾವುದೇ ಲೋಪಗಳು ಆಗದಂತೆ ನಿಗಾವಹಿಸುವಂತೆ ಶಿಕ್ಷಕರಿಗೆ ಹಾಗೂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಡಿಡಿಪಿಐ ಎಂ.ಎಲ್.ಹಂಚಾಟೆ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಲ್.ಎಸ್. ಹಿರೇಮಠ ಹಾಗೂ ಶಾಲಾ ಶಿಕ್ಷಕರು, ಸಿಬ್ಬಂದಿ ಮತ್ತಿತರರು ಉಪಸ್ಥಿತರಿದ್ದರು.

ರೈತರೊಂದಿಗೆ ನಾವಿದ್ದೇವೆ; ಅಭಿಯಾನ

ಧಾರವಾಡ ಜಿಲ್ಲಾಡಳಿತದಿಂದ ವಿನೂತನ ಅಭಿಯಾನ; ಬರಪರಿಹಾರ ಕಾರ್ಯಕ್ರಮಗಳ ಕುರಿತು ಪೊಸ್ಟರ್, ಬ್ಯಾನರ್, ಧ್ವನಿವರ್ಧಕ ಮೂಲಕ ರೈತರಿಗೆ ಮನವರಿಕೆ

ಧಾರವಾಡ : ಕಳೆದ ಸೆಪ್ಟೆಂಬರ ಮತ್ತು ಅಕ್ಟೋಬರದಲ್ಲಿ ರಾಜ್ಯ ಸರ್ಕಾರವು ಧಾರವಾಡ ಜಿಲ್ಲೆ ಪೂರ್ಣ ಬರಪಡಿತ ಜಿಲ್ಲೆಯೆಂದು ಘೋಷಿಸಿತು. ಅಂದಿನಿಂದ ಧಾರವಾಡ ಜಿಲ್ಲಾಡಳಿತವು ಜನ, ಜಾನುವಾರುಗಳಿಗೆ ಅಗತ್ಯವಾದ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಮತ್ತು ಜನರಿಗೆ ನರೇಗಾ ಯೋಜನಯಡಿ ಉದ್ಯೋಗ ನೀಡಲು ಕಾರ್ಯಾರಂಭ ಮಾಡಿತು.

ಕುಡಿಯುವ ನೀರಿನ ಸಮಸ್ಯೆ ಕಂಡುಬಂದ ಗ್ರಾಮಗಳಿಗೆ ಈಗಾಗಲೇ ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಜಾನುವಾರುಗಳಿಗೆ ಅಗತ್ಯವಿರುವ ಮೇವು ಸರಬರಾಜು ಮಾಡಲು ಜಿಲ್ಲೆಯ ವಿವಿಧ ಸ್ಥಳಗಳಲ್ಲಿ 7 ಮೇವು ಬ್ಯಾಂಕಗಳನ್ನು ತರೆಯಲಾಗಿದ್ದು, ಈಗಾಗಲೇ ರೈತರು ಮೇವು ಖರೀದಿ ಮಾಡುತ್ತಿದ್ದಾರೆ.

ಆದರೂ ರೈತರಿಗೆ ಮೇವು ಬ್ಯಾಂಕ್, ಮೇವು ಮಾರಾಟದ ಬಗ್ಗೆ ಮಾಹಿತಿ ನೀಡಲು ಮತ್ತು ಬರ ಪರಿಸ್ಥಿತಿಯಲ್ಲಿ ರೈತರಿಗೆ ಧೈರ್ಯ ತುಂಬಲು ಧಾರವಾಡ ಜಿಲ್ಲಾಡಳಿತವು "ರ

ಶ್ರೀಮಂತರ ಬಗ್ಗೆಯಷ್ಟೇ ಬಿಜೆಪಿಗೆ ಚಿಂತೆ ಎಂದು ಕಟುಕಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ರಾಯಬಾಗದಲ್ಲಿ ಚಿಕ್ಕೋಡಿ ಕ್ಷೇತ್ರದ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಪರ ಸಚಿವರ ಪ್ರಚಾರ

ರಾಯಭಾಗ : ಕಾಂಗ್ರೆಸ್ ಪಕ್ಷ ಸದಾ ಬಡವರ ಕಷ್ಟಕ್ಕೆ ಮಿಡಿಯುವ ಪಕ್ಷ. ಬಡವರ ಏಳಿಗೆಗಾಗಿ ಈ ದೇಶಕ್ಕೆ ಹಲವು ಕಾರ್ಯಕ್ರಮಗಳನ್ನು ಕೊಟ್ಟ ಇತಿಹಾಸವಿದೆ. ಕಾಂಗ್ರೆಸ್ ಬಡವರ ಬಗ್ಗೆ ಚಿಂತಿಸುತ್ತಿದ್ದರೆ, ಬಿಜೆಪಿ ಶ್ರೀಮಂತರ ಏಳಿಗೆಗೆ ಮಾತ್ರ ಶ್ರಮಿಸುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಬಿಜೆಪಿ ವಿರುದ್ಧ ಟೀಕಾ ಪ್ರಹಾರ ನಡೆಸಿದರು.

ಚಿಕ್ಕೋಡಿ ಲೋಕಸಭಾ ವ್ಯಾಪ್ತಿಯ ರಾಯಭಾಗದಲ್ಲಿ ಸೋಮವಾರ ಪ್ರಿಯಾಂಕಾ ಜಾರಕಿಹೊಳಿ ಪರ ಪ್ರಚಾರದ ಸಭೆಯಲ್ಲಿ ಮಾತನಾಡಿದ ಸಚಿವರು, ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಬಡವರ ಹಸಿವನ್ನ ನೀಗಿಸಿದ್ದಾರೆ. ಚುನಾವಣೆಗೂ ಮುನ್ನ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಅಧಿಕಾರಕ್ಕೆ ಬಂದ ಕೇವಲ 100 ದಿನಗಳಲ್ಲಿ ಜಾರಿಗೊಳಿಸುವ ಮೂಲಕ ನುಡಿದಂತೆ ನಡೆದಿದ್ದೇವೆ ಎಂದು ಹೇಳಿದರು.

ಗೃಹಲಕ್ಷ್ಮಿ ಯೋಜನೆಯನ್ನು ಜಾರಿಗೆ ತರಬಾರದು ಎಂದು ಬಿಜೆಪಿ ಶಾಸಕರು ವಿಧಾನಸಭೆ ಅಧಿವೇಶನದಲ್ಲಿ ಗಲಾಟೆ ಎಬ್ಬಿಸಿದ್ದರು ಎಂದು ಆರೋಪಿಸಿದರು.

ನಾನು ಕೂಡ ರಾಮ ಭಕ್ತಳೆ. ಅಯೋಧ್ಯೆಯಲ್ಲಿ ನಿರ್ಮಾಣವಾದ ರಾಮಮಂದಿರಕ್ಕೆ ವೈಯಕ್ತಿಕವಾಗಿ 2 ಲಕ್ಷ ರೂಪಾಯಿ ದೇಣಿಗೆ ನೀಡಿದ್ದೇನೆ. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಬಡವರ ಬಗ್ಗೆ ಇಟ್ಟುಕೊಂಡಿರುವ ಚಿಂತನೆಗಳು ರಾಮರಾಜ್ಯದ ಪರಿಕಲ್ಪನೆ ಹೊಂದಿವೆ ಎಂದರು. ಬಿಜೆಪಿಯವರ ರೀತಿ ಬೂಟಾಟಿಕೆಗೆ ರಾಮ ರಾಮ ಎನ್ನುವುದಿಲ್ಲ ಎಂದು ಹೇಳಿದರು. ಬದ್ಧತೆಗೆ ಮತ್ತೊಂದು ಹೆಸರೇ ಕಾಂಗ್ರೆಸ್ ಎಂದು ಸಚಿವರು ಹೇಳಿದರು.

ಪ್ರಧಾನ ಮಂತ್ರಿ ನರೇಂದ್ರ ಮೋದಿ

ಮಾತಾಡಿದ್ರೆ ಸಾಕು, ಸಬ್ ಕಾ ಸಾಥ್, ಸಬ್ ಕಾ ವಿಕಾಸ್ ಎಂದು ಹೇಳುತ್ತಾರೆ. ಕರ್ನಾಟಕದ 28 ಲೋಕಸಭಾ ಕ್ಷೇತ್ರಗಳಲ್ಲಿ ಒಂದೇ ಒಂದು ಸೀಟನ್ನು ಅಲ್ಪಸಂಖ್ಯಾತರಿಗೆ ನೀಡಿಲ್ಲ. ಎಲ್ಲಿ ಹೋಯಿತು ಅವರ ಮಾತು ಎಂದು ಟೀಕಿಸಿದರು.

ಸತೀಶಣ್ಣ ಕುಟುಂಬಕ್ಕೆ ರಾಜಕಾರಣ ಹೊಸದಲ್ಲ:

ಜಾರಕಿಹೊಳಿ ಕುಟುಂಬಕ್ಕೆ ರಾಜಕಾರಣ ಹೊಸದಲ್ಲ. ಪ್ರಿಯಾಂಕಾ ಜಾರಕಿಹೊಳಿ ಮುಗ್ಧ ಹೆಣ್ಣುಮಗಳು, ಆದರೆ ತುಂಬಾ ಬುದ್ಧಿವಂತೆ. ಈ ಯುವ ನಾಯಕಿಯನ್ನು ಗೆಲ್ಲಿಸುವ ಮೂಲಕ ಚಿಕ್ಕೋಡಿ ಕ್ಷೇತ್ರದ ಅಭಿವೃದ್ಧಿಗೆ ಸಹಕರಿಸಿ ಎಂದು ಹೇಳಿದರು.

ಬಹಿರಂಗ ಸಭೆಯಲ್ಲೇ ಸತೀಶ್ ಅಣ್ಣನವರು ಚಿಕ್ಕೋಡಿಗೆ ಕುರುಬ ಸಮುದಾಯದ ವ್ಯಕ್ತಿಗೆ ಟಿಕೆಟ್ ನೀಡಬೇಕು ಎಂದು ಕೇಳಿದ್ದರು. ಆದರೆ, ಸಿದ್ದರಾಮಯ್ಯ, ಹಿರಿಯ ಶಾಸಕರಾದ ಲಕ್ಷ್ಮಣ್ ಸವದಿ ಮತ್ತು ನನ್ನ ಸಲಹೆ ಮೇರೆಗೆ ಪ್ರಿಯಾಂಕಾಳನ್ನು ಆಯ್ಕೆ ಮಾಡಲಾಯಿತು ಎಂದರು.

ಪ್ರಿಯಾಂಕಾಳಿಗೆ ಒಂದು ಅವಕಾಶ ಕೊಡಿ. ಕರ್ನಾಟಕದ ಹಾಗೂ ಚಿಕ್ಕೋಡಿ ಧ್ವನಿಯಾಗಿ ದೆಹಲಿಯಲ್ಲಿ ಕೆಲಸ ಮಾಡುತ್ತಾಳೆ. ಓದಿಕೊಂಡಿರುವ ಪ್ರಿಯಾಂಕಾಗೆ ರಾಜ-ಕೀಯದಲ್ಲಿ ಉತ್ತಮ ಭವಿಷ್ಯವಿದೆ.

ಆಕೆಯನ್ನು ಬೆಂಬಲಿಸಿ ಎಂದು ಮನವಿ ಮಾಡಿದರು. ಸತೀಶ್ ಜಾರಕಿಹೊಳಿ ಅವರ ಇಬ್ಬರು ಮಕ್ಕಳು ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಸತೀಶ್ ಅಣ್ಣನವರನ್ನು ರಾಜಕಾರಣದಲ್ಲಿ, ಸಮಾಜಸೇವೆಯಲ್ಲಿ ನೋಡಿದ್ದೆ, ಇಂದು ಅವರನ್ನು ತಂದೆ ಪಾತ್ರದಲ್ಲಿ ನೋಡಿದ್ದು ಖುಷಿ ನೀಡಿತು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಸಭೆಯಲ್ಲಿ ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ, ಶಾಸಕರುಗಳಾದ ರಾಜು ಕಾಗೆ, ಲಕ್ಷ್ಮಣ ಸವದಿ, ಮಹೇಂದ್ರ ತಮ್ಮಣ್ಣವರ, ಗಣೇಶ ಹುಕ್ಕೇರಿ, ಎಸ್.ಬಿ ಘಾಟಗೆ, ಗಜಾನನ ಮಂಗಸೂಳಿ, ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ, ಮುಖಂಡರಾದ ವೀರಕುಮಾರ ಪಾಟೀಲ, ಎ.ಬಿ.ಪಾಟೀಲ, ಲಕ್ಷ್ಮಣರಾವ್ ಚಿಂಗಳೆ, ಮಹಾವೀರ ಮೋಹಿತೆ, ಡಾ.ಮಗದುಮ್ಮ, ಸಂಜು ಬಾನೆ, ಡಿ.ಎಸ್.ನಾಯಕ, ನಿರ್ಮಲಾ ಪಾಟೀಲ, ಯಲ್ಲಪ್ಪ ಶಿಂಗೆ, ಸಿದ್ಧಾರೂಢ್ ಬಂಡಗರ್, ಶಂಕರಗೌಡ ಪಾಟೀಲ, ಸದಾಶಿವ ದೇಶಿಂಗೆ ಮೊದಲಾದವರು ಉಪಸ್ಥಿತರಿದ್ದರು.

ಏ.3 ರಂದು ಮಂಗಳಮುಖಿಯ-ರಿಂದ ಮತದಾನ ಜಾಗೃತಿ ಜಾಥಾ

ಬೆಳಗಾವಿ: ಸಾರ್ವತ್ರಿಕ ಲೋಕಸಭಾ ಚುನಾವಣಾ 2024ರ ಅಂಗವಾಗಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾರರಿಗೆ ಮತದಾನದ ಜಾಗೃತಿ ಮೂಡಿಸುವ ಉದ್ದೇಶದಿಂದ ಏ.3 ರಂದು ಸಂಜೆ 5 ಗಂಟೆಗೆ ಚನ್ನಮ್ಮ ವೃತ್ತದಿಂದ ಕೃಷ್ಣದೇವರಾಯ ವೃತ್ತ, ಮಹಾನಗರ ಪಾಲಿಕೆಯವರೆಗೆ ಮಂಗಳಮುಖಿಯರಿಂದ ಮತದಾನದ ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏ.5 ರಂದು ಡಾ. ಬಾಬು ಜಗಜೀವನರಾಮ್ ಅವರ 117 ನೇ ಜನ್ಮ ದಿನಾಚರಣೆ

ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಡಾ. ಬಾಬು ಜಗಜೀವನರಾಮ್ ಅವರ 117 ನೇ ದಿನಾಚರಣೆಯ ಅಂಗವಾಗಿ ಏ.5 ರಂದು ಬೆಳಗ್ಗೆ 9:30 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿಯಿಂದ ಡಾ. ಬಾಬು ಜಗಜೀವನರಾಮ್ ಉದ್ಯಾನವನವರೆಗೆ ಮೆರವಣಿಗೆ ಕಾರ್ಯಕ್ರಮ ನಡೆಯಲಿದೆ. ನಂತರ ಬೆಳಗ್ಗೆ 11 ಗಂಟೆಗೆ ಸಂಗಮೇಶ್ವರ ನಗದ ಡಾ. ಬಾಬು ಜಗಜೀವನರಾಮ್ ಉದ್ಯಾನವನದಲ್ಲಿ ವೇದಿಕೆಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಎಸ್. ಬಿ. ಶೆಟ್ಟೆಣ್ಣವರ ಅವರು ಉದ್ಘಾಟಿಸುವರು.

ಜಿಲ್ಲಾಧಿಕಾರಿಗಳಾದ ನಿತೇಶ್ ಪಾಟೀಲ್ ಅಧ್ಯಕ್ಷತೆ ವಹಿಸಲಿದ್ದಾರೆ. ಉತ್ತರ ವಲಯ ಆರಕ್ಷಕ ಮಹಾನಿರೀಕ್ಷಕರಾದ ವಿಕಾಸ್ ಕುಮಾರ ವಿಕಾಸ್ ಅವರು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಿಲಿದ್ದಾರೆ.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾ-ರಿಗಳಾದ ರಾಹುಲ ಶಿಂಧೆ, ಪೊಲೀಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿಗಳಾದ ಭೀಮಾಶಂಕರ ಗುಳೇದ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಪಕರಾದ ಹನುಮಂತಪ್ಪ ಸಂಜೀವಣ್ಣನವರ ಅವರು ಉಪಸ್ಥಿತರಿರುವರು.

ನದಿಯಲ್ಲಿ ಈಜಲು ತೆರಳಿದ್ದ ಮೂವರು ವಿದ್ಯಾರ್ಥಿಗಳು ನೀರುಪಾಲು

ಶಿವಮೊಗ್ಗ: ತುಂಗಾ ನದಿಯಲ್ಲಿ ಈಜಲು ತೆರಳಿದ್ದ ಮೂವರು ವಿದ್ಯಾರ್ಥಿಗಳು ನೀರುಪಾಲಾದ ಘಟನೆ ಶಿವಮೊಗ್ಗ ಜಿಲ್ಲೆಯ ತೀರ್ಥ-ಹಳ್ಳಿಯಲ್ಲಿ ನಡೆದಿದೆ. ರಂಜಾನ್ ಉಪವಾಸ ಮುಗಿಸಿ ಮೂವರು SSLC ವಿದ್ಯಾರ್ಥಿಗಳು ಈಜಲು ತುಂಗಾನದಿಗೆ ತೆರಳಿದ್ದ ವೇಳೆ ದುರಂತ ಸಂಭವಿಸಿದೆ. ಮೃತ ವಿದ್ಯಾರ್ಥಿಗಳನ್ನು ರಫನ್, ಇಯನ್ ಹಾಗೂ ಸಮ್ಮರ್ ಎಂದು ಗುರುತಿಸಲಾಗಿದೆ. ಅಗ್ನಿಶಾಮಕ ದಳದ ಸಿಬ್ಬಂದಿ ಹಾಗೂ ಸ್ಥಳೀಯ ಪೊಲೀಸರು ಮೂವರು ವಿದ್ಯಾರ್ಥಿಗಳ ಮೃತದೇಹವನ್ನು ನದಿಯಿಂದ ಹೊರತೆಗೆದಿದ್ದಾರೆ. ತೀರ್ಥಹಳ್ಳಿ ಪಟ್ಟಣದ ತುಂಗಾ ನದಿಯ ರಾಮ ಮಂಟಪದ ಬಳಿ ಘಟನೆ ನಡೆದಿದ್ದು, ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿದೆ. ಈ ಕುರಿತು ತೀರ್ಥಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ದ್ವಿತೀಯ ಪಿಯುಸಿ ಕನ್ನಡ ವಿಷಯ ಮೌಲ್ಯಮಾಪನ ಪೂರ್ಣ

ಕನ್ನಡ ಸಾಂಸ್ಕೃತಿಕ ವಿವೇಚನೆ ಮೂಡಿಸುವುದು ಶಿಕ್ಷಕರ ಜವಾಬ್ದಾರಿ: ಎಂ.ಎಂ. ಕಾಂಬಳೆ

ಬೆಳಗಾವಿ: ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ಕನ್ನಡ ಉತ್ತರ ಪತ್ರಿಕೆಗಳ ಬೆಳಗಾವಿ, ಚಿಕ್ಕೋಡಿ, ವಿಜಯಪುರ ಮತ್ತು ಬಾಗಲಕೋಟ ಶೈಕ್ಷಣಿಕ ಜಿಲ್ಲೆಯ ಉಪನ್ಯಾಸಕರು ಬೆಳಗಾವಿ ಜೆಜಿಇ ಸಂಸ್ಥೆಯ ಜೈನ ಪವದಿ ಪೂರ್ವ ಕಾಲೇಜು ಕೇಂದ್ರದದಲ್ಲಿ ಇಂದು ಸುಸೂತ್ರವಾಗಿ ಪೂರ್ಣಗೊಳಿಸಿದ್ದಾರೆ. ಈ ನಿಮಿತ್ತ ಕೇಂದ್ರದಲ್ಲಿ ಇಂದು ಆಯೋಜಿಸಲಾಗಿದ್ದ ನಿವೃತ್ತ ಪ್ರಾಚಾರ್ಯರ, ಉಪನ್ಯಾಸಕರ ಹಾಗೂ ಸಾಧಕರ ಸನ್ಮಾನ ಮತ್ತು ಬೀಳ್ಕೊಡುಗೆ ಸಮಾರಂಭ ಜರುಗುತು.

ಸಸಿಗೆ ನೀರು ಎರೆಯುವುದರ ಮೂಲಕ ಕಾರ್ಯಕ್ರಮವನ್ನು ಬೆಳಗಾವಿ ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆಯ

ಉಪ ನಿರ್ದೇಶಕರ ಎಂ.ಎಂ. ಕಾಂಬಳೆ ಉದ್ಘಾಟಿಸಿದರು. ನಂತರ ಮಾತನಾಡಿದ ಕಾಂಬಳೆ ಅವರು, ಕನ್ನಡ ವಿಷಯ ಉತ್ತರ ಪತ್ರಕೆಗಳ ಮೌಲ್ಯಮಾಪನ ಬೆಳಗಾವಿ ಕೇಂದ್ರದಲ್ಲಿ ಸುಸೂತ್ರವಾಗಿ ಪೂರ್ಣಗೊಂಡಿದೆ. ಕಾಳಜಿಯಿಂದ ಕಾರ್ಯನಿರ್ವಹಿಸಿದ ಸಮಸ್ತ ಕನ್ನಡ ಉಪನ್ಯಾಸಕರು ಹಾಗೂ ಕೇಂದ್ರದ ಎಲ್ಲ ಸಿಬ್ಬಂದಿ ಅಭಿನಂದನಾರ್ಹರು ಎಂದು ತಿಳಿಸಿದರು.

ಕನ್ನಡ ನೆಲ, ಜಲ, ಭಾಷೆ ಹಾಗೂ ಸಂಸ್ಕೃತಿಕ ವಿಶೇಷತೆಯ ಬಗ್ಗೆ ಕನ್ನಡ ಶಿಕ್ಷಕರು ವಿಶೇಷ ಕಾಳಜಿ ಹೊಂದಿರಬೇಕು. ಈ ಬಗ್ಗೆ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡುಕೊಡುವಲ್ಲಿ ತಮ್ಮ ಜವಾಬ್ದಾರಿ ನಿರ್ವಹಿಸಬೇಕು ಉಪ ನಿರ್ದೇಶಕರ ಎಂ. ಎಂ. ಕಾಂಬಳೆ ಸೂಚಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ ಜೈನ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ವಿಶಾಲ ಪಾಟೀಲ, ಕಾಲೇಜಿನ ಕೇಂದ್ರದಲ್ಲಿ ಕನ್ನಡ ವಿಷಯ ಮೌಲ್ಯಮಾಪನ ಅವಕಾಶ ದೊರೆತಿರುವುದು ನಮ್ಮ ಸೌಭಾಗ್ಯ. ಸಾಧ್ಯವಾದಮಟ್ಟಿಗೆ ಯಾವುದೇ ತೊಂದರೆಯುಂಟಾಗದಂತೆ ಅನುಕೂಲ ಮಾಡಿಕೊಡಲಾಗಿದೆ ಎಂದು ತಿಳಿಸಿದರು.

ವೇದಿಕೆಯ ಮೇಲೆ ಮುಖ್ಯ ಪರೀಕ್ಷಕ ಬಿ.ಎಚ್. ಮಾರದ, ವೀಕ್ಷಕರು. ಎಸ್.ಎ. ರಾಮನಕಟ್ಟಿ, ಆರ್.ಪಿ.ಡಿ. ಪಿಯು ಕಾಲೇಜಿನ ಪ್ರಾಚಾರ್ಯರಾದ ಸುಜಾತಾ ಬಿಜಾಪುರೆ, ಕನ್ನಡ ವಿಷಯ ಸಂಘಟನೆಯ ಜಿಲ್ಲಾವಾರು ಅಧ್ಯಕ್ಷರಾದ ಚಂದ್ರಶೆಖರ ಹಂಚಿನಮನೆ, ಬೆಳಗಾವಿ ಡಾ. ಸುಬ್ರಾವ್ ಎಂಟೆತ್ತಿನವರ, ಕೆ.ಜಿ. ಲಮಾಣಿ, ಡಾ. ನಾಗರಾಜ್ ನಾಡಗೌಡರ ಉಪಸ್ಥಿರಿದರು.

ಇದೇ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯರು, ಉಪನ್ಯಾಸಕರು ಮತ್ತು ಇತರೆ ಸಾಧಕರಾದ ಡಾ. ವೈ. ಎಂ. ಯಾಕೊಳ್ಳಿ,ಎ.ಆರ್. ನಾಯಕ, ಪ್ರಾಚಾರ್ಯರು, ಡಿ.ಡಿ. ಹಾದಿಮನಿ, ಪ್ರಾಚಾರ್ಯರು. ಎಸ್.ಎಂ. ಕಾರಜೋಳ, ಬಿ.ಕೆ. ಹಿರೇಮಠ, ಡಾ. ನಾಗರಾಜ್ ನಾಡಗೌಡರ, ಎ. ಪಾಟೀಲ. ಎನ್.ಸಿ. ಆಲೂರ, ಪಿ.ಬಿ. ಕರಗಾಂವ, ಕರಿಯಪ್ಪ, ಸುರೇಶ ಹಾದಿಮನಿ, ಬಸವರಾಜ್ ಕಟ್ಟಿಮನಿ, ಸಿದ್ದು ಸಾವಳಸಂಗ ಅವರಿಗೆ ಶಾಲು ಹೊದಿಸಿ ಸನ್ಮಾನಿಸಲಾಯಿತು.

ಧಾರವಾಡ: ಜಿಲ್ಲಾ ಚುನಾವಣಾಧಿಕಾರಿಗಳಾದ ದಿವ್ಯ ಪ್ರಭು ಅವರು ಮಂಗಳವಾರ ಮಧ್ಯಾಹ್ನ ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಸ್ಥಾಪಿಸಲಿರುವ, ಧಾರವಾಡ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತ ಏಣಿಕಾ ಕೇಂದ್ರದ ಸಿದ್ಧತೆಯನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಬಿ.ಆರ್ಟಿ.ಎಸ್. ವ್ಯವಸ್ಥಾಪಕ ನಿರ್ದೇಶಕ ಶಿವಾನಂದ ಭಜಂತ್ರಿ, ಎಸಿ ಶಾಲಂ ಹುಸೇನ್, ತಹಸಿಲ್ದಾರ ಡಾ.ಡಿ.ಎಚ್.ಹೂಗಾರ ಸೇರಿದಂತೆ ಇತರ ಅಧಿಕಾರಿಗಳು ಇದ್ದರು.

ಬೆಳಗಾವಿ ಜಿಲ್ಲೆಯ ಚೆಕ್ ಪೋಸ್ಟ್ ನಲ್ಲಿ ಲಕ್ಷಾಂತರ ರೂ. ವಶ

ಬೆಳಗಾವಿ: ದಾಖಲೆ ಇಲ್ಲದೆ ಸಾಗಿಸುತ್ತಿದ್ದ 6.65 ಲಕ್ಷ ಹಣವನ್ನು ತಾಲ್ಲೂಕಿನ ಬಾಚಿ ಚೆಕ್ ಪೋಸ್ಟ್‌ನಲ್ಲಿ ಸೋಮವಾರ ಮಧ್ಯರಾತ್ರಿ ಚುನಾವಣೆ ಸಿಬ್ಬಂದಿ ವಶಪಡಿಸಿಕೊಂಡಿದ್ದಾರೆ.

ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಕರ್ನಾಟಕ-ಮಹಾರಾಷ್ಟ್ರ ಗಡಿಯ ಚೆಕ್ ಪೋಸ್ಟ್‌ನಲ್ಲಿ ವಾಹನಗಳ ತಪಾಸಣೆ ಮಾಡಲಾಗುತ್ತಿತ್ತು. ಈ ವೇಳೆ, ಅಮೂಲ್ ವಿದ್ಯಾಧರ ಅವರಿಂದ ಹಣ ವಶಕ್ಕೆ ಪಡೆಯಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ. ಚುನಾವಣೆ ಹತ್ತಿರವಾದಂತೆ

ಬೆಳಗಾವಿ ಜಿಲ್ಲೆಯ ಚೆಕ್ ಪೋಸ್ಟ್ ನಲ್ಲಿ ಬಿಗಿ ಕಾರ್ಯಾಚರಣೆ ಆರಂಭವಾಗಿದೆ. ಬೆಳಗಾವಿ ಜಿಲ್ಲೆಯಿಂದ ಬೇರೆ ರಾಜ್ಯಕ್ಕೆ ಹೋಗುವ ಹಾಗೂ ಆ ರಾಜ್ಯಗಳಿಂದ ಬೆಳಗಾವಿಗೆ ಬರುವ ವಾಹನಗಳ ತಪಾಸಣೆ ಇದೀಗ ತೀವ್ರಗೊಂಡಿದೆ. ಚುನಾವಣೆ ಹತ್ತಿರವಾದಂತೆ ಅಕ್ರಮಣ ಸಾಗಾಟ ನಡೆಯಬಹುದು ಎಂಬ ಶಂಕೆ ಮೇಲೆ ಇದೀಗ ಪೊಲೀಸರು ಪ್ರತಿಯೊಂದು ವಾಹನದ ಮೇಲೆ ಹದ್ದಿನ ಕಣ್ಣಿಟ್ಟಿದ್ದಾರೆ.

ಅಕ್ಕ ಮಹಾದೇವಿ ಅಧ್ಯಾತ್ಮ ಲೋಕದ ಸಚೇತನ ಶಕ್ತಿ: ಮೈತ್ರೇಯಿಣಿ ಗದಿಗೆಪ್ಪ ಗೌಡರ

ಭಾರತೀಯ ಅಧ್ಯಾತ್ಮ ಪರಂಪರೆಯಲ್ಲಿ ಅಕ್ಕಮಹಾದೇವಿ ಸಚೇತನ ಶಕ್ತಿ ಆಗಿದ್ದಾಳೆ. ಆತ್ಮನೊಂದಿಗೆ ಸಕಾರಣವಾಗಿ ತನ್ನನ್ನು ತಾನು ಅರಿತುಕೊಳ್ಳುವ ಅನುಸಂಧಾನವೇ ಅಧ್ಯಾತ್ಮ. ದೇಹಭಾವ ಅಳೆದು, ಇಂದ್ರಿಯ ನಿಗ್ರಹ ಮಾಡಿ ತುರ್ಯಾಸ್ಥ ಸ್ಥಿತಿಗೆ ಏರುವ ಸ್ಥಿತಿ ತಲುಪಿದ ಅಕ್ಕಮಹಾದೇವಿ ವಚನ ಚಳುವಳಿಯ ಒಂದು ಭಿನ್ನ ಸ್ವರವಾಗಿ ಹೊರಹೊಮ್ಮಿದ್ದಾಳೆ

ಅಡುಗೆ ಮನೆಯಿಂದ ಅನುಭವ ಮಂಟಪಕ್ಕೆ ಮಹಿಳೆಯರನ್ನು ತಂದ ಕೀರ್ತಿ ವಚನ ಚಳುವಳಿಗೆ ಸಲ್ಲುತ್ತದೆ

ಎಂದು ಡಾ. ಮೈತ್ರೇಯಣಿ ಗದಿಗೆಪ್ಪ ಗೌಡರ ಅಭಿಪ್ರಾಯ ಪಟ್ಟರು. ಅವರು ಬೆಳಗಾವಿ ಕಾರಂಜಿಮಠದಲ್ಲಿ ಜರುಗಿದ ಶಿವಾನುಭವ ಗೋಷ್ಠಿಯಲ್ಲಿ ಮುಖ್ಯ ಅತಿಥಿಗಳಾಗಿ ಅನುಭಾವ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ನೀಲಗಂಗಾ ಚರಂತಿಮಠ ಅವರು ಮಹಾದೇವಿಯಕ್ಕ ಕನ್ನಡ ನಾಡಿನ ಮೊಟ್ಟ ಮೊದಲ ಕವಯತ್ರಿ. ಅವಳ ಪ್ರೇರಣೆಯಿಂದ ನಾನು ಮುಕ್ತಾಂಗಣೆ ಎಂಬ ಮಹಾಕಾವ್ಯ ಬರೆದೆ ಎಂದು ಸ್ಮರಿಸಿದರು. ಜ್ಯೋತಿ ಬಾದಾಮಿ ಅತಿಥಿಗಳಾಗಿ ಆಗಮಿಸಿದ್ದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಪೂಜ್ಯ ಶ್ರೀ ಗುರುಸಿದ್ಧ ಸ್ವಾಮಿಗಳು ವಹಿಸಿ, ಅಕ್ಕಮಹಾದೇವಿ ಇಡೀ ಮಹಿಳಾ ಸಂಕುಲಕ್ಕೆ ಆದರ್ಶಪ್ರಾಯ ವ್ಯಕ್ತಿತ್ವ ಹೊಂದಿದ ಮಹಾಶರಣೆ. ಅಕ್ಕನ ವಚನಗಳು ಅನುಭಾವ ಸಾಹಿತ್ಯದ ಅಪೂರ್ವ ಚಿಂತನೆಗಳಾಗಿವೆ ಎಂದು ಆಶೀರ್ವಚನದಲ್ಲಿ ಹೇಳಿದರು.

ವೇದಿಕೆಯ ಮೇಲೆ ಕಾರಂಜಿಮಠದ ಉತ್ತರಾಧಿಕಾರಿಗಳಾದ ಡಾ. ಶಿವಯೋಗಿ ದೇವರು, ಘೋಡಗೇರಿ ವಿರಕ್ತ ಮಠದ ಪೂಜ್ಯ ಶ್ರೀ ಪ್ರಭುಲಿಂಗ ಸ್ವಾಮೀಜಿ ಉಪಸ್ಥಿತರಿದ್ದರು. ಕಾರಂಜಿಮಠದ ಶ್ರೀ ಕುಮಾರೇಶ್ವರ ಸಂಗೀತ ಶಾಲೆಯ ಮಕ್ಕಳು ವಚನ ಪ್ರಾರ್ಥನೆ ಸಲ್ಲಿಸಿದರು.ಎ.ಕೆ.ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ವಿ.ಕೆ.ಪಾಟೀಲ ವಂದನಾರ್ಪಣೆ ಮಾಡಿದರು.

ಜಿಲ್ಲಾ ವ